ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 99
4-10-2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 99

# ದಸರಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾರಾಮಾರಿ, ಡಿವೈಎಸ್ಪಿ ಸೂರಜ್‌ಗೆ ಗಾಯ

**ಮಡಿಕೇರಿ:** ಮಡಿಕೇರಿಯ ಗಾಂಧಿ ಮೈದಾನದಲ್ಲಿ ಶುಕ್ರವಾರ ನಡೆದ ದಸರಾ ವೇದಿಕೆಯಲ್ಲಿ ಬಹುಮಾನ ವಿತರಣಾ ಸಮಾರಂಭದ ವೇಳೆ ದೇವಾಲಯ ಸಮಿತಿಯೊಂದು ಟ್ಯಾಬ್ಲೋ ತೀರ್ಪಿಗೆ ಆಕ್ಷೇಪ ವ್ಯಕ್ತಪಡಿಸಿದ ನಂತರ ವೇದಿಕೆ ಹಿಂಸಾಚಾರಕ್ಕೆ ತಿರುಗಿತು.

ವೇದಿಕೆಯಲ್ಲಿ ಗದ್ದಲ ಉಂಟಾಗಿ, ಪೊಲೀಸರನ್ನು ತಳ್ಳಾಡಲಾಗಿದ್ದು, ಘಟನೆಯಲ್ಲಿ ಡಿವೈಎಸ್ಪಿ ಮತ್ತು ಕಾನ್‌ಸ್ಟೆಬಲ್ ಗಾಯಗೊಂಡರು, ಒಬ್ಬ ಆರೋಪಿಯನ್ನು ವಶಕ್ಕೆ ಪಡೆಯಲಾಗಿದೆ.

ಶುಕ್ರವಾರ ಬೆಳಗಿನ ಜಾವ ಹತ್ತು ದೇವಸ್ಥಾನ ಸಮಿತಿಗಳ ಟ್ಯಾಬ್ಲೋ ಪ್ರದರ್ಶನದ ನಂತರ ಬಹುಮಾನ ವಿತರಣಾ ಸಮಾರಂಭ ನಡೆಯಿತು. ನ್ಯಾಯಾಧೀಶರು ನಾಲ್ಕು ಸಮಿತಿಗಳನ್ನು ವಿಜೇತರು ಎಂದು ಘೋಷಿಸಿದಾಗ, ಶ್ರೀ ಕರವಾಲೆ ಭಗವತಿ ದೇವಸ್ಥಾನ ಸಮಿತಿಯನ್ನು ಪ್ರತಿನಿಧಿಸುವುದಾಗಿ ಹೇಳಿಕೊಳ್ಳುವ ಗುಂಪೊಂದು ವೇದಿಕೆಯ ಮೇಲೆ ನುಗ್ಗಿ ತೀರ್ಪು ಮತ್ತು ಹತ್ತು ದೇವಸ್ಥಾನ ಸಮಿತಿಯ ವಿರುದ್ಧ ಘೋಷಣೆಗಳನ್ನು ಕೂಗಿ-ತು.

ಭಗವತಿ ದೇವಸ್ಥಾನ ಸಮಿತಿಯ ಸುಮಾರು 100 ಜನರು ವೇದಿಕೆಯನ್ನು ವಶಪಡಿಸಿಕೊಂಡು ಅದನ್ನು ಧ್ವಂಸಗೊಳಿಸಿದರು.

ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸರು ಲಾಠಿ ಪ್ರಹಾರ ನಡೆಸಬೇಕಾಯಿತು; ಆದಾಗ್ಯೂ, ಮಡಿಕೇರಿ ಡಿವೈಎಸ್ಪಿ ಪಿಎ ಸೂರಜ್ ಅವರನ್ನು ತಳ್ಳಿದ ಪರಿಣಾಮ ಅವರು ವೇದಿಕೆಯಿಂದ ಬಿದ್ದರು. ಅವರ ತಲೆ ಮತ್ತು ಕಾಲಿಗೆ ಗಾಯಗಳಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿತು. "ಡಿವೈಎಸ್ಪಿ ಮೇಲಿನ



ಹಲ್ಲೆಯಲ್ಲಿ ಭಾಗಿಯಾಗಿದ್ದ ಆರೋಪಿ ಯಕ್ಷಿತ್‌ನನ್ನು ನಾವು ಬಂಧಿಸಿದ್ದೇವೆ" ಎಂದು ಎಸ್‌ಪಿ ಕೆ ರಾಮರಾಜನ್ ಶುಕ್ರವಾರ ಮಾಧ್ಯಮಗಳನ್ನುದ್ದೇಶಿಸಿ ದೃಢಪಡಿಸಿದರು.

ಆರೋಪಿ ಕುಡಿದ ಅಮಲಿನಲ್ಲಿದ್ದ ಮತ್ತು ಸರಿಯಾಗಿ ನಡೆಯಲು ಸಹ ಸಾಧ್ಯವಾಗುತ್ತಿರಲಿಲ್ಲ ಎಂದು ಅವರು ವಿವರಿಸಿದ್ದಾರೆ. "ಆರೋಪಿಯನ್ನು ತಕ್ಷಣ ಬಂಧಿಸಲಾಯಿತು. ಬಂಧನದ ಸಮಯದಲ್ಲಿ ಅವನು ಸಹಕರಿಸಲಿಲ್ಲ. ಪೊಲೀಸ್ ಅಧಿಕಾರಿಗಳ ಮೇಲೆ ಹಲ್ಲೆ ಮತ್ತು ಸಾರ್ವಜನಿಕ ತೊಂದರೆ ಉಂಟುಮಾಡಿದ್ದಕ್ಕಾಗಿ ಬಿಎನ್‌ಎಸ್ ಸೆಕ್ಷನ್ 132 ಮತ್ತು 355 ರ ಅಡಿಯಲ್ಲಿ ಅವನ ಮೇಲೆ ಪ್ರಕರಣ ದಾಖಲಿಸಲಾಗಿದೆ" ಎಂದು ಎಸ್‌ಪಿ ಹೇಳಿದರು.

ಆರೋಪಿಯನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗುವುದು ಮತ್ತು ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು. ಏತನ್ಮಧ್ಯೆ, ಧ್ವನಿ ಮಾಲಿನ್ಯ ಮತ್ತು ಪರಿಸರ ಮಾಲಿನ್ಯ ನಿಯಂತ್ರಣ ಕಾಯ್ದೆಗಳಿಗೆ ಸಂಬಂಧಿಸಿದಂತೆ ಹಲವಾರು ದೇವಾಲಯ ಸಮಿತಿಗಳಿಂದ ಉಲ್ಲಂಘನೆಗಳಾಗಿವೆ ಎಂದು ಎಸ್‌ಪಿ ದೃಢಪಡಿಸಿದರು.

"ಸಂಬಂಧಪಟ್ಟ ಅಧಿಕಾರಿಗಳು ಈ ಸಂಬಂಧ ವರದಿಯನ್ನು ಸಲ್ಲಿಸುತ್ತಾರೆ. ವರದಿಯ ನಂತರ, ಉಲ್ಲಂಘನೆಗಳಿಗೆ ಸೂಕ್ತ ಕ್ರಮಗಳನ್ನು ಪ್ರಾರಂಭಿಸಲು ಡಿವೈಎಸ್‌ಪಿ ಹೈಕೋರ್ಟ್‌ಗೆ ದೂರು ಸಲ್ಲಿಸುತ್ತಾರೆ" ಎಂದು ಎಸ್‌ಪಿ ದೃಢಪಡಿಸಿದರು.

ಉತ್ಸವವನ್ನು ಆಚರಿಸಲು ಪೊಲೀಸರು ಕಟ್ಟುನಿಟ್ಟಿನ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದ್ದರೂ, ದೇವಾಲಯ ಸಮಿತಿಗಳು ಅದನ್ನು ಉಲ್ಲಂಘಿಸಿವೆ ಏಕೆಂದರೆ ಅನೇಕ ಸಮಿತಿಗಳು ಜೋರಾಗಿ ಡಿಜೆ ಶಬ್ದಗಳನ್ನು ಬಳಸಿ ಸಾರ್ವಜನಿಕ ಕಿರಿಕಿರಿಯನ್ನುಂಟುಮಾಡುತ್ತವೆ ಎಂದು ಎಸ್ ಪಿ ಹೇಳಿದ್ದಾರೆ.

ಏತನ್ಮಧ್ಯೆ, ಬಹುಮಾನ ವಿತರಣಾ ಸಮಾರಂಭದಲ್ಲಿ ಸಾರ್ವಜನಿಕರಿಗೆ ತೊಂದರೆ ಉಂಟುಮಾಡಿದ ಮತ್ತು ಸಾರ್ವಜನಿಕರ ಸುರಕ್ಷತೆಗೆ ಅಡ್ಡಿಪಡಿಸಿದ ಕರವಾಲೆ ಭಗವತಿ ದೇವಸ್ಥಾನ ಸಮಿತಿ ಸದಸ್ಯರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಸ್ಪಿ ದೃಢಪಡಿಸಿದರು. ಸ್ತಬ್ಧಚಿತ್ರ ಸ್ಪರ್ಧೆಯಲ್ಲಿ, ಕೋಟೆ ಮಹಾ ಗಣಪತಿ ದೇವಸ್ಥಾನ ಮತ್ತು ಕೋಟೆ ಮಾರಿಯಮ್ಮ ದೇವಸ್ಥಾನ ಸಮಿತಿಗಳು ಪ್ರಥಮ ಬಹುಮಾನವನ್ನು ಹಂಚಿಕೊಂಡವು, ಕಾಂಚಿ ಕಾಮಾಕ್ಷಿ ದೇವಸ್ಥಾನ ಮತ್ತು ದಂಡಿನ ಮಾರಿಯಮ್ಮ ದೇವಸ್ಥಾನ ಸಮಿತಿಗಳು ಕ್ರಮವಾಗಿ ಎರಡನೇ ಮತ್ತು ಮೂರನೇ ಬಹುಮಾನವನ್ನು ಪಡೆದುಕೊಂಡವು.

## ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿದೆ, ಸರ್ಕಾರದ ಬಳಿ ಹಣವಿಲ್ಲ: ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ

**ಬೆಂಗಳೂರು:** ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ 'ಐದು ಗ್ಯಾರಂಟಿ' ಯೋಜನೆಗಳಿಂದಾಗಿ ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿದೆ ಎಂದು ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಶುಕ್ರವಾರ ಆರೋಪಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲಬುರಗಿ ಸೇರಿದಂತೆ ಉತ್ತರ ಕರ್ನಾಟಕದ ಆರು ಜಿಲ್ಲೆಗಳಲ್ಲಿ ಉಂಟಾಗಿರುವ ತೀವ್ರ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಸರ್ಕಾರದ ಬಳಿ ಹಣವಿಲ್ಲ ಎಂದು ದೂರಿದರು.

ಮುಂದಿನ ಒಂದು ವಾರದೊಳಗೆ ಕಲಬುರಗಿ ಮತ್ತು ನೆರೆ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸುತ್ತೇನೆ. ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿ ಮಾಡಿ



ರಾಜ್ಯದ ಪ್ರವಾಹ ಪೀಡಿತ ಜನರಿಗೆ ಪರಿಹಾರ ನೀಡುವಂತೆ ಒತ್ತಾಯಿಸುತ್ತೇನೆ ಎಂದರು.ಮಹಾರಾಷ್ಟ್ರದ ಅಣೆಕಟ್ಟೆಗಳಿಂದ ನೀರು ಬಿಡುಗಡೆ ಮಾಡಿರುವುದರಿಂದ ಭೀಮಾ ಮತ್ತು ಕೃಷ್ಣಾ ನದಿ ಪ್ರದೇಶಗಳಲ್ಲಿ ಪ್ರವಾಹ ಉಂಟಾಗಿದೆ. ಕಲಬುರಗಿ, ವಿಜಯಪುರ, ಬೀದರ್ ಮತ್ತು ಯಾದಗಿರಿ ಜಿಲ್ಲೆಗಳು ಅತಿ ಹೆಚ್ಚು ಹಾನಿಗೊಳಗಾದ ಜಿಲ್ಲೆಗಳಾಗಿವೆ. ಬೆಳೆ ನಷ್ಟದ ಜೊತೆಗೆ, ಅನೇಕ ಮನೆಗಳು ಹಾನಿಗೊಳಗಾಗಿವೆ ಮತ್ತು ಹಲವಾರು ಜಾನುವಾರುಗಳು ನೀರು ಪಾಲಾಗಿವೆ.

ಖಾತರಿ ಯೋಜನೆ'ಗಳಿಂದಾಗಿ ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿದೆ. ಇದನ್ನು ಹೇಳುತ್ತಿರುವುದು ನಾನಲ್ಲ, ಕಾಂಗ್ರೆಸ್ ಶಾಸಕರೇ ಹೇಳುತ್ತಿದ್ದಾರೆ. ಆಡಳಿತ ಪಕ್ಷದ ಶಾಸಕರಲ್ಲಿ ಗೊಂದಲವಿದೆ. ಅವರು (ಕಾಂಗ್ರೆಸ್ ಶಾಸಕರು) ಇಂತಹ ಭೀಕರ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಸಹ ಸರ್ಕಾರದ ಬಳಿ ಹಣವಿಲ್ಲ ಎಂದು ಹೇಳುತ್ತಿದ್ದಾರೆ ಎಂದು ಮಾಜಿ ಪ್ರಧಾನಿ ಹೇಳಿದರು.

ಪ್ರವಾಹದಿಂದಾಗಿ 50ಕ್ಕೂ ಹೆಚ್ಚು ಜನರು ಪ್ರಾಣ ಕಳೆದುಕೊಂಡಿದ್ದಾರೆ ಮತ್ತು ಜಾನುವಾರುಗಳು ಮೃತಪಟ್ಟಿವೆ. ಬೆಳೆಗಳು ಸಂಪೂರ್ಣ ನಾಶವಾಗಿವೆ. ರಸ್ತೆಗಳು, ಸೇತುವೆಗಳು ಮತ್ತು ಮನೆಗಳಿಗೆ ಹಾನಿಯುಂಟಾಗಿದೆ. ನಾನು ಕಲಬುರಗಿಗೆ ಭೇಟಿ ನೀಡಿ ವಾಸ್ತವವನ್ನು ನೋಡುತ್ತೇನೆ. ಅಲ್ಲಿಗೆ ಭೇಟಿ ನೀಡಿದ ನಂತರ, ಸರ್ಕಾರ ಏನು ಮಾಡಿದೆ ಎಂಬುದರ ಕುರಿತು ನನ್ನ ಅಭಿಪ್ರಾಯವನ್ನು ನೀಡುತ್ತೇನೆ' ಎಂದು ಗೌಡ ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಇತ್ತೀಚೆಗೆ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ವೈಮಾನಿಕ ಸಮೀಕ್ಷೆ ನಡೆಸಿ, ಬೆಳೆ ಹಾನಿಯನ್ನು ಪರಿಶೀಲಿಸಿದ್ದಾರೆ. ಆದರೆ, ಯಾವೆಲ್ಲ ಪರಿಹಾರ ಕೈಗೊಂಡಿ-ದ್ದಾರೆ ಎಂಬುದನ್ನು ತಿಳಿಸಿಲ್ಲ ಎಂದು ಹೇಳಿದ ಅವರು, ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಜನರ ಸಂಕಷ್ಟಗಳನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಕುರಿತು ಮಾತನಾಡಿದ ದೇವೇಗೌಡರು, ಯಾವುದೇ ಚುನಾವಣೆಯಾದರೂ ಮೈತ್ರಿ ಮುಂದುವರಿಯುತ್ತದೆ. ಮೈತ್ರಿಕೂಟದ ಬಗ್ಗೆ ಚಿಂತಿಸುವ ಅಗತ್ಯವಿಲ್ಲ. ಪಂಚಾಯಿತಿ ಮತ್ತು ವಿಧಾನಸಭಾ ಚುನಾವಣೆಗಳಿಗೂ ಇದು ಮುಂದುವರಿಯುತ್ತದೆ' ಎಂದು ಅವರು ಹೇಳಿದರು.

## ಬಳ್ಳಾರಿ: ದೇವರಘಟ್ಟ ಜಾತ್ರೆಯಲ್ಲಿ ದೊಣ್ಣೆಗಳಿಂದ ಬಡಿದಾಟ- ಇಬ್ಬರು ಸಾವು

**ಬಳ್ಳಾರಿ:** ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಹೊಳಗುಂದ ಮಂಡಲದ ದೇವರಗಟ್ಟದ ಮಾಳ ಮಲ್ಲೇಶ್ವರ ಸ್ವಾಮಿ ಬನ್ನಿ ಉತ್ಸವ ಸಂದರ್ಭದಲ್ಲಿ ಗ್ರಾಮಸ್ಥರ ನಡುವೆ ಘರ್ಷಣೆ ಸಂಭವಿಸಿದ್ದು, ಇಬ್ಬರು ಮೃತಪಟ್ಟಿದ್ದಾರೆ. ನೂರು ಜನರಿಗೆ ಗಾಯಗಳಾಗಿವೆ ಎಂದು ತಿಳಿದು ಬಂದಿದೆ.

ಗುರುವಾರ ಮಧ್ಯರಾತ್ರಿ ಮಲ್ಲೇಶ್ವರ ಸ್ವಾಮಿ ಮತ್ತು ಮಾಳಮ್ಮ ದೇವಿಯ ಕಲ್ಯಾಣೋತ್ಸವ ನಂತರ ರಾಜಬೀದಿಯಲ್ಲಿ ಚೈತ್ರಯಾತ್ರೆ ನಡೆಸಲಾಯಿತು. ದೇವರ ವಿಗ್ರಹಗಳನ್ನು ತೆಗೆದುಕೊಂಡು ಹೋಗಲು ಎರಡು ಗುಂಪುಗಳು ಪೈಪೋಟಿ ನಡೆಸಿದವು.

ಈ ಪ್ರಕ್ರಿಯೆಯಲ್ಲಿ ಕೋಲುಗಳಿಂದ ಹೊಡೆದಾಟ ನಡೆಯಿತು. ಇದರ ಪರಿಣಾಮವಾಗಿ ಇಬ್ಬರು ಭಕ್ತರು ಮೃತಪಟ್ಟರು. 100 ಜನರು ಗಾಯಗೊಂಡರು.

## ಕರ್ನಾಟಕದ ಕಾಫಿಗೆ ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಉತ್ತಮ

**ಚಿಕ್ಕಮಗಳೂರು:** ಅರಣ್ಯ ಮತ್ತು ಕಂದಾಯ ಇಲಾಖೆಗಳಿಂದ ಜಂಟಿ ಸರ್ವೇ ಕಾರ್ಯ ನಡೆಯುವವರೆಗೆ ಕಾಫಿ ಒತ್ತುವರಿ ಸಮಸ್ಯೆ ಬಗೆಹರಿಸಲು ಆಗುವುದಿಲ್ಲ. ಡೀಮ್ಡ್ ಫಾರೆಸ್ಟ್ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಭರವಸೆ ನೀಡಿದರು.

ಅವರು ನಗರದ ಆಜಾದ್ ಪಾರ್ಕ್‌ನಲ್ಲಿ ಚಿಕ್ಕಮಗಳೂರು ಜಿಲ್ಲಾ ಬೆಳೆಗಾರರ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಅಂತರಾಷ್ಟ್ರೀಯ ಕಾಫಿ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಾಫಿ ಬೆಲೆ ಏರುಪೇರಾದರೂ ಗೊಬ್ಬರ, ಕಾರ್ಮಿಕರ ವೇತನ ಇನ್ನಿತರೆ ನಿರ್ವಹಣಾ ವೆಚ್ಚ ಏರುಪೇರು ಆಗುವುದಿಲ್ಲ. ಸದ್ಯ-




ಕ್ಕೆ ಕಾಫಿ ಬೆಲೆ ಉತ್ತಮವಾಗಿದ್ದರೂ ಅದು ಹೀಗೇ ಇರುತ್ತದೆ ಎಂದು ಹೇಳಲಾಗುವುದಿಲ್ಲ ಎಂದರು.

ಕರ್ನಾಟಕ ಬೆಳೆಗಾರರ ಒಕ್ಕೂಟದ ಅಧ್ಯಕ್ಷ ಹಳಸೆ ಶಿವಣ್ಣ ಮಾತನಾಡಿ, 1925 ರಲ್ಲಿ ಅಂತರಾಷ್ಟ್ರೀಯ ಕಾಫಿ ಸಂಶೋಧನಾ ಕೇಂದ್ರ ಆರಂಭವಾಗಿದ್ದು, ಇದೀಗ 100 ವರ್ಷ ತುಂಬುತ್ತಿದೆ. ಅದರ ಸಂಭ್ರಮವನ್ನು ನ.6 ರಿಂದ 9 ರವರೆಗೆ ನಡೆಸಲಾಗುವುದು ಎಂದರು.

ಪ್ರತಿ ವರ್ಷ ದೇಶದ ಬೊಕ್ಕಸಕ್ಕೆ ಸುಮಾರು 15 ಸಾವಿರ ಕೋಟಿ ರೂ. ಆದಾಯ ಸಂದಾಯವಾಗುತ್ತಿದೆ. ವರ್ಷ ಪೂರ್ತಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸುತ್ತಿದೆ. ಕಾಫಿ ಕೃಷಿಯಲ್ಲಿ ಹೊಸ ತಳಿಗಳ ಪರಿಚಯ ಮತ್ತು ಯಾಂತ್ರೀಕರಣ ಅಗತ್ಯವಾಗಿ ಆಗಬೇಕಿದೆ.

## ಹರಿಹರ : ಬೆಸ್ಕಾಂ ವಿಭಾಗೀಯ ಉಗ್ರಾಣದಲ್ಲಿ ಹಗರಣ



**ಹರಿಹರ:** ನಗರದ ಬೆಸ್ಕಾಂ ವಿಭಾಗೀಯ ಉಗ್ರಾಣದಲ್ಲಿ ಕೋಟ್ಯಾಂತರ ಮೌಲ್ಯದ ಸಾಮಗ್ರಿಗಳ ದುರುಪಯೋಗ ಮಾಡಿರುವ ಆರೋಪದ ಮೇಲೆ ಸಹಾಯಕ ಉಗ್ರಾಣ ಪಾಲಕ ಜಿ.ಎನ್. ಅರುಣಕುಮಾರ್ ಹಾಗೂ ಮತ್ತಿತರರ ವಿರುದ್ಧ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

2018ರ ಜೂನ್ 19ರಿಂದ 2025ರ ಸೆಪ್ಟೆಂಬರ್ 16ರವರೆಗೆ ಹರಿಹರ ಬೆಸ್ಕಾಂ ಉಗ್ರಾಣದ ಸಹಾಯಕ ಉಗ್ರಾಣ ಪಾಲಕ ಅರುಣಕುಮಾರ್, ಲೆಡ್ಜರ್ ದಾಖಲೆಗಳಲ್ಲಿ ಸಾಮಗ್ರಿಗಳು ನೈಜವಾಗಿ ಉಗ್ರಾಣದಲ್ಲಿರು ವಂತೆ ನಮೂದಿಸಿ, ಅವುಗಳನ್ನು ಹೊರಕ್ಕೆ ಸಾಗಿಸಿ ದುರುಪಯೋಗ ಮಾಡಿಕೊಂಡಿರುವ, ವಿಶೇಷವಾಗಿ, ಗ್ಯಾರಂಟಿ ಅವಧಿಯಲ್ಲಿದ್ದ ಪರಿವರ್ತಕಗಳನ್ನು ದುರಸ್ತಿ ಕೇಂದ್ರಗಳಿಗೆ ಕಳುಹಿಸದೆ, ಇನ್ವಾಯ್ಸ್ ಸಂಖ್ಯೆಗಳನ್ನು ಮಾತ್ರ ಲೆಡ್ಜರ್ ನಲ್ಲಿ ದಾಖಲಿಸಿ ವಂಚನೆ ಮಾಡಿದ ಬಗ್ಗೆ ಆರೋಪ ಕೇಳಿಬಂದಿದೆ.

ವಿವರ: 2025ರ ಏಪ್ರಿಲ್‌ನಲ್ಲಿ ತ್ರೈಮಾಸಿಕ ಪರಿಶೀಲನೆ ನಡೆಸಿದ ಆಂತರಿಕ ಲೆಕ್ಕಪರಿಶೋಧ ಕರು, ಪರಿವರ್ತಕ ತೈಲದಲ್ಲಿ (ಟಿ.ಸಿ.ಆಯಿಲ್) 89,270 ಲೀಟರ್ ಕೊರತೆ ಕಂಡುಬಂದಿದ್ದು, ಸಂಸ್ಥೆಗೆ ರೂ.56,67,864 ಆರ್ಥಿಕ ನಷ್ಟ ಉಂಟಾಗಿದೆ ಎಂದು ವರದಿ ನೀಡಿದ್ದರು. ವರದಿ ಹಿನ್ನೆಲೆಯಲ್ಲಿ, ಮೇಲಾಧಿಕಾರಿಗಳು ಉಗ್ರಾಣದಲ್ಲಿ ಸಾಮಗ್ರಿಗಳ ಎಣಿಕೆ ಕಾರ್ಯ ಕೈಗೊಂಡು, ಉಗ್ರಾಣದಲ್ಲಿದ್ದ ಸಾಮಗ್ರಿಗಳ ಭೌತಿಕ ಎಣಿಕೆ ಮತ್ತು ಲೆಡ್ಜರ್ ದಾಖಲೆಗಳನ್ನು ಹೋಲಿಕೆ ಮಾಡಿದಾಗ, ಒಟ್ಟು 39 ವಿಧದ ಸಾಮಗ್ರಿಗಳಲ್ಲಿ ಭಾರೀ ಕೊರತೆ ಕಂಡು ಬಂದಿತ್ತು. ಒಟ್ಟಾರೆ ರೂ. 3,85,69,119 ಮೌಲ್ಯದ ಸಾಮಗ್ರಿಗಳನ್ನು ದುರುಪಯೋಗ ಮಾಡಲಾಗಿದೆ ಎಂಬುದು ಪರಿಶೀಲನೆಯಿಂದ ದೃಢಪಟ್ಟಿದ್ದು, ಕಾನೂನು ಕ್ರಮ ಜರುಗಿಸಬೇಕೆಂದು ಬೆಸ್ಕಾಂನ ಕಾರ್ಯ ನಿರ್ವಾಹಕ ಇಂಜಿನಿಯರ್ ರವಿಕಿರಣ ದೂರಿನಲ್ಲಿ ವಿವರಿಸಿದ್ದಾರೆ.

ಕ್ರಿಮಿನಲ್ ವಿಶ್ವಾಸಘಾತುಕತನ, ಸಾರ್ವಜನಿಕ ನೌಕರನಾಗಿ ಸ್ವತ್ತಿನ ದುರುಪಯೋಗ, ಮೋಸ, ವಂಚನೆ ಮುಂತಾದ ಬಿಎನ್‌ಎಸ್ ಕಲಂಗಳಡಿ ಸೋಮವಾರ ದೂರು ದಾಖಲಿಸಿ ಕೊಂಡಿರುವ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಎಂ ಎಂ ಹಿಲ್‌ನಲ್ಲಿ ಹುಲಿ ಹತ್ಯೆ ತನಿಖೆಗೆ ಈಶ್ವರ ಖಂಡ್ರೆ ಆದೇಶ

**ಬೆಂಗಳೂರು:** ಮಲೈಮಹದೇಶ್ವರ ವನ್ಯಧಾಮದಲ್ಲಿ ಹೆಣ್ಣು ಹುಲಿಯನ್ನು ಹತ್ಯೆ ಮಾಡಿರುವ ಪ್ರಕರಣ ವರದಿಯಾಗಿದೆ.

ಕಳೆದ ಜೂನ್‌ನಲ್ಲಿ ಮಲೈಮಹದೇಶ್ವರ ಬೆಟ್ಟದ ವನ್ಯಧಾಮದಲ್ಲಿ ಒಂದು ಹೆಣ್ಣು ಹುಲಿ ಹಾಗೂ 4 ಹುಲಿ ಮರಿಗಳಿಗೆ ವಿಷವಿಟ್ಟು ಕೊಂದ ಘಟನೆ ಮಾಸುವ ಮುನ್ನವೇ ನಿನ್ನೆ ರಾತ್ರಿ ಮಲೈಮಹದೇಶ್ವರ ಬೆಟ್ಟದಲ್ಲಿ ಹೆಣ್ಣು ಹುಲಿಯನ್ನು ಹತ್ಯೆ ಮಾಡಿರುವುದು ವನ್ಯಜೀವಿ ಪ್ರೇಮಿಗಳಲ್ಲಿ ಕಳವಳ ಮೂಡಿಸಿದೆ.

ಮಲೈಮಹದೇಶ್ವರ ವನ್ಯಧಾಮದ ಹನೂರು ಅರಣ್ಯ ಪ್ರದೇಶದಲ್ಲಿ ಹೆಣ್ಣು ಹುಲಿಯ ಅರ್ಧ ಭಾಗದ ಕಳೇಬರ ಪತ್ತೆಯಾಗಿದೆ.

ಪಚ್ಚೆದೊಡ್ಡಿ ಗ್ರಾಮದ ಬಳಿ ನಿನ್ನೆ ಸಂಜೆ ಅರಣ್ಯ ಇಲಾಖೆ ಸಿಬ್ಬಂದಿ ಗಸ್ತು ತಿರುಗುವಾಗ ಮಣ್ಣಿನಲ್ಲಿ ಹುದುಗಿಸಿಟ್ಟ ಹುಲಿಯ ಅರ್ಧ ಕಳೇಬರ ಪತ್ತೆಯಾಗಿದೆ. ಹುಲಿಯ ತಲೆ, ಭುಜ, ಮುಂದಿನ ಕಾಲುಗಳು ಪತ್ತೆಯಾಗಿದ್ದು, ಉಳಿದ ಭಾಗಗಳು ಪತ್ತೆಯಾಗಿಲ್ಲ. ಹುಲಿಯ ಕಳೇಬರದ ಉಳಿದ ಭಾಗಗಳಿಗೆ ಅರಣ್ಯ ಸಿಬ್ಬಂದಿ ಶೋಧ ನಡೆಸಿದ್ದಾರೆ.

ಈಗ ಸಿಕ್ಕಿರುವ ಕಳೇಬರಹದಲ್ಲಿ ಉಗುರು ಮತ್ತು ಹಲ್ಲುಗಳಿವೆ. ಉಳಿದ ಭಾಗ ಏನಾಯಿತು, ಎಲ್ಲಿದೆ ಎಂಬ ಬಗ್ಗೆ ಶೋಧ ಕಾರ್ಯಾಚರಣೆ ನಡೆದಿದೆ. ಅರಣ್ಯ ಇಲಾಖೆ ಈ ಸಂಬಂಧ ಕಳ್ಳಬೇಟೆ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದೆ.

ಹುಲಿಯನ್ನು ಹತ್ಯೆ ಮಾಡಿರುವ ಹಂತಕರ ಪತ್ತೆಗೆ ಶ್ವಾನ ದಳದ ನೆರವನ್ನು ಪಡೆಯಲಾಗಿದ್ದು, ಶೀಘ್ರವೇ ಆರೋಪಿಗಳನ್ನು ಪತ್ತೆಹಚ್ಚಲಾಗುವುದು ಮಲೈಮಹದೇಶ್ವರ ವನ್ಯಧಾಮದ ಉಪಅರಣ್ಯ ಸಂರಕ್ಷಣಾಧಿಕಾರಿ ಭಾಸ್ಕರ್ ತಿಳಿಸಿದ್ದಾರೆ.

## ದಸರಾ ಮಹೋತ್ಸವದ ಪ್ರಯುಕ್ತ ಶ್ರೀ ದುರ್ಗಾಂಭಿಕಾ ದೇವಸ್ಥಾನದಲ್ಲಿ ಸಾಮೂಹಿಕ ವಿವಾಹ

**ದಾವಣಗೆರೆ:** ದಸರಾ ಮಹೋತ್ಸವದ ಪ್ರಯುಕ್ತ ನಗರದೇವತೆ ಶ್ರೀ ದುರ್ಗಾಂಭಿಕಾ ದೇವಸ್ಥಾನದಲ್ಲಿ ಸಾಮೂಹಿಕ ವಿವಾಹವನ್ನು ಹಮ್ಮಿಕೊಳ್ಳಲಾಗಿತ್ತು.

ಪ್ರತಿವರ್ಷವೂ ನವರಾತ್ರಿ ಹಬ್ಬದ ಅಂಗವಾಗಿ ಸಾಮೂಹಿಕ ವಿವಾಹ ಏರ್ಪಡಿಸುತ್ತಾ ಬಂದಿದ್ದು, ಈ ಬಾರಿಯೂ ಸಹ ಸಾಮೂಹಿಕ ವಿವಾಹದಲ್ಲಿ 21 ಜೋಡಿ ನೂತನ ದಾಂಪತ್ಯಕ್ಕೆ ಅಡಿಯಿಟ್ಟರು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರು ನಗರದೇವತೆ ಶ್ರೀ ದುರ್ಗಾಂಬಿಕಾ ದೇವಿ ಆಶೀರ್ವಾದದಿಂದ ನವಜೋಡಿಯ ದಾಂಪತ್ಯ ಜೀವನವು ಸುಖ, ಶಾಂತಿ ಮತ್ತು ಸಮೃದ್ಧಿಯಿಂದ ಕೂಡಿರಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಆವರಗೊಳ್ಳ ಓಂಕಾರ ಶಿವಾಚಾರ್ಯ ಮಹಾಸ್ವಾಮಿಗಳು, ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ, ಮಾಜಿ ಮಹಾಪೌರ ಗೋಣೆಪ್ಪ, ಉಮೇಶ್‌ರಾವ್ ಸಾಳಂಕಿ, ಹನುಮಂತರಾವ್ ಸಾವಂತ್, ಬಡಗಿ ರಾಮಕೃಷ್ಣ, ಸೊಪ್ಪಿನ ಗುರುರಾಜ್, ಹನುಮಂತ ಜಾಧವ್, ಶಂಕರರಾವ್ ಸಿಂಧೆ, ಮುದೇಗೌಡ್ರು ವಿಶ್ವನಾಥ, ಜಯಪ್ರಕಾಶ್ ಜೆ.ಕೆ., ಗೌಡ್ರು ಸುರೇಶ್, ಕರಿಗಾರ ಬಸಪ್ಪ, ಬಾಬುರಾವ್ ಸಾಳಂಕಿ, ಕವಿರಾಜ್, ಶ್ರೀನಿವಾಸ್ ಪವಾರ್, ದೇವಸ್ಥಾನ ಸಮಿತಿಯವರು, ಭಕ್ತಾಧಿಗಳು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಶ್ರೀಮತಿ ಪಾರ್ವತಮ್ಮ ಶಾಮನೂರು ಶಿವಶಂಕರಪ್ಪ ಅವರ ಜ್ಞಾಪಕಾರ್ಥವಾಗಿ ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು.



## ಇಂದು ಕಲಾಕಲ್ಪ ಪ್ರತಿಭೋತ್ಸವ

**ದಾವಣಗೆರೆ:** ಸಂಸ್ಕೃತಿ ವಿದ್ಯಾ ಪ್ರತಿಷ್ಠಾನದ ಕಲಾಕಲ್ಪ ಕಲಾ ಶಾಲೆಯ 11ನೇ ಕಲಾಕಲ್ಪ ಪ್ರತಿಭೋತ್ಸವ-2025 ನೃತ್ಯ ಮಾರ್ಗ ಕಾರ್ಯಕ್ರಮವನ್ನು ಅ.4ರಂದು ಸಂಜೆ 4 ಕ್ಕೆ ನಗರದ ಗುಂಡಿ ಮಹದೇವಪ್ಪ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ಅವರಗೊಳ್ಳ ಶಿವಾಚಾರ್ಯ ಸ್ವಾಮೀಜಿ ದಿವ್ಯ ಸಾನಿಧ್ಯದಲ್ಲಿ ಮತ್ತು ಸಂಸ್ಕೃತಿ ವಿದ್ಯಾ ಪ್ರತಿಷ್ಠಾನದ ಅಧ್ಯಕ್ಷರಾದ ಐನಹಳ್ಳಿ ವಿಶ್ವ ಪ್ರಕಾಶ್ ಅಧ್ಯಕ್ಷತೆಯಲ್ಲಿ ಜರಗುವ ಕಾರ್ಯಕ್ರಮದಲ್ಲಿ ದೂಡ ಅಧ್ಯಕ್ಷ ದಿನೇಶ್ ಕೆ ಶೆಟ್ಟಿ, ಪ್ರತಿಮಾ ಸಭಾದ ಅಧ್ಯಕ್ಷ ಬಾಮ ಬಸವರಾಜಯ್ಯ, ಮಹಿಳಾ ಸೇವಾ ಸಮಾಜದ ಕಾರ್ಯದರ್ಶಿ ನೀಲಗುಂದ ಜಯಮ್ಮ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಶ್ರೀ ಶಾರದಾ ನೃತ್ಯಾಲಯ ಸಂಸ್ಥಾಪಕ ನಿರ್ದೇಶಕರಾದ ಪ್ರಿಯ ಸವಣೂರು ಇವರಿಗೆ ಕಲಾ ಕಲ್ಪ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಮಧುಮತಿ ಗಿರೀಶ್ ಮತ್ತು ಗಿರೀಶ್ ದೇವಿಗೆರೆ ಇವರಿಗೆ ಮಾತಾಪಿತೃ ವಂದನ ಮತ್ತು ನೃತ್ಯ ಗುರುಗಳಾದ ಎಂ. ಪಿ ವಿವೇಕ್ ಇವರಿಗೆ ಗುರುವಂದನೆ ನಡೆಯಲಿದೆ. ಕಾರ್ಯಕ್ರಮದಲ್ಲಿ ಕಲಾಕಲ್ಪದ ವಿದುಷಿ ಐನಹಳ್ಳಿ ಅಶ್ವಿಕ ರಂಗ ಪ್ರವೇಶ ಮಾಡಲಿದ್ದಾರೆ.

## ಅಡಿಕೆ ಸಂಗ್ರಹಿಸದೆ ಮಾರಾಟ ಮಾಡಿ; ತೇಜಸ್ವಿ ವಿ. ಪಟೇಲ್

**ದಾವಣಗೆರೆ:** ರೈತರನ್ನು ಕೈಹಿಡಿದಿರುವ ಬೆಳೆ ಹೊಸ ಅಡಿಕೆ ಕ್ವಿಂಟಾಲ್‌ಗೆ 61,000 ರೂ., ತಲುಪಿದ್ದು ಇನ್ನೂ ಹೆಚ್ಚಾಗುವ ಸಂಭವವಿದೆ. ಹಾಗೆಂದ ಮಾತ್ರಕ್ಕೆ ರೈತರು ಅಡಿಕೆಯನ್ನು ಸಂಗ್ರಹಿಸಿ, ದರ ಹೆಚ್ಚಳದ ನಿರೀಕ್ಷೆ ಮಾಡುತ್ತಾ ಕೂರಬಾರದು ಎಂದು ಕಬ್ಬು ನಿಯಂತ್ರಣ ಮಂಡಳಿಯ ನಾಮ ನಿರ್ದೇಶಿತ ಸದಸ್ಯ ತೇಜಸ್ವಿ ವಿ. ಪಟೇಲ್ ಮನವಿ ಮಾಡಿದ್ದಾರೆ.

ದರ ಹೆಚ್ಚಿದಂತೆ ಇನ್ನೂ ಹೆಚ್ಚಾಗಬಹುದೆಂಬ ಬಯಕೆಯಲ್ಲಿ ಸಂಗ್ರಹ ಮುಂದುವರೆಸುವುದು ಅಥವಾ ದರ ಕಡಿಮೆಯಾಗುತ್ತಿರುವುದನ್ನು ನೋಡುತ್ತಿದ್ದಂತೆ ಸಂಪೂರ್ಣ ಸಂಗ್ರಹವನ್ನು ಮಾರಾಟಕ್ಕೆ ಪ್ರಯತ್ನಿಸುವುದು ಇದು ಸಾಮಾನ್ಯ. ಈ ಸ್ವಭಾವ ಲಾಭ ತರುವುದಕ್ಕಿಂತ ನಷ್ಟವುಂಟು ಮಾಡಿರುವುದೇ ಹೆಚ್ಚು. ಅಡಿಕೆ ದರ ಹೆಚ್ಚಾಗುತ್ತಿದ್ದಂತೆ ನಮ್ಮ ಸಂಗ್ರಹದಲ್ಲಿ ಒಂದಿಷ್ಟು ಅಡಿಕೆಯನ್ನು ಮಾರಾಟ ಮಾಡುತ್ತಾ ಹೋಗಬೇಕು. ಆಗ ಮಾರುಕಟ್ಟೆಯಲ್ಲಿ ದರದ ಸ್ಥಿರತೆಯನ್ನು ಕಾಯ್ದುಕೊಳ್ಳಬಹುದು ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಇನ್ನೂ ದರ ಹೆಚ್ಚಾಗಬಹುದೆಂಬ ನಿರೀಕ್ಷೆಯಲ್ಲಿ ಅಡಿಕೆ ಸಂಗ್ರಹವನ್ನು ಹಾಗೇ ಇಟ್ಟುಕೊಂಡರೆ ಸಂಘಟಿತ ವರ್ತಕರು ದರವನ್ನು ಬೀಳಿಸಿ, ರೈತರು ಮುಗಿಬಿದ್ದು ಅಡಿಕೆ ಮಾರಾಟ ಮಾಡುವಂತ ಪರಿಸ್ಥಿತಿಯನ್ನು ನಿರ್ಮಾಣ ಮಾಡುತ್ತಾರೆ. ಮಾರುಕಟ್ಟೆ ಸ್ಥಿರತೆ, ಅವೈಜ್ಞಾನಿಕ ಕುಸಿತ ಅಥವಾ ಅನಿರೀಕ್ಷಿತ ದರ ಹೆಚ್ಚಳ ಇದೆಲ್ಲವುದನ್ನು ಒಂದು ನಿಯಂತ್ರಣದಲ್ಲಿ ಇಡಬೇಕೆಂದರೆ ಅಡಿಕೆ ಬೆಳೆಗಾರರು ಬೆಳೆಯಲಿಕ್ಕೆ ಹಾಕುವ ಶ್ರಮಕ್ಕಿಂತ ಮಾರಾಟ ಮಾಡುವಾಗ ತಿಳುವಳಿಕೆಯನ್ನು ಹೆಚ್ಚಿಸಿಕೊಳ್ಳಬೇಕಿದೆ ಎಂದು ಸಲಹೆ ನೀಡಿದ್ದಾರೆ.

## ಅ.6ಕ್ಕೆ ಸಾಮಾಜಿಕ ಅಭಿವೃದ್ಧಿ ರಂಗದ ಪದಾಧಿಕಾರಿಗಳ ಪದಗ್ರಹಣ ಸಮಾರಂಭ

**ದಾವಣಗೆರೆ:** ಬೆಂಗಳೂರಿನ ಸಾಮಾಜಿಕ ಅಭಿವೃದ್ಧಿ ರಂಗದ ದಾವಣಗೆರೆ ಜಿಲ್ಲಾ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಅ.6ರಂದು ಬೆಳಿಗ್ಗೆ 11.30ಕ್ಕೆ ನಗರದ ಹಳೇ ಪ್ರವಾಸಿ ಮಂದಿರದ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಸಂಘಟನೆಯ ರಾಜ್ಯಾಧ್ಯಕ್ಷ ತ.ಲ. ರಂಗನಾಥ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಮಹಿಳಾ ಘಟಕದ ನೂತನ ಜಿಲ್ಲಾಧ್ಯಕ್ಷರಾದ ಚೈತ್ರಾ ವಹಿಸುವರು. ಮುಖ್ಯ ಅತಿಥಿಗಳಾಗಿ ಕಾಡಜ್ಜಿಯ ಅಲ್ಪಸಂಖ್ಯಾತರ ಮುಖಂಡರಾದ ಚಾಂದ್ ಪೀರ್, ಮಹಿಳಾ ಮುಖಂಡರಾದ ಡಿ. ಚೈತ್ರ, ರೈತ ಮುಖಂಡ ಎನ್. ಸುರೇಶ್, ಕುಂದವಾಡ ಮಂಜುನಾಥ್, ನಾಗರಾಜನಾಯ್ಕ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಹೆಚ್.ಮಲ್ಲೇಶ್, ಅಹ್ಮದ್ ಷರೀಫ್, ರೇಖಾ, ಈರಣ್ಣ, ಮಲ್ಲಿಕಾರ್ಜುನಪ್ಪ, ವಿಶ್ವಣ್ಣ, ಪರಶುರಾಮ್, ಸಾಮಾಜಿಕ ಅಭಿವೃದ್ಧಿ ರಂಗದ ಉಪಾಧ್ಯಕ್ಷ ನಾರಾಯಣಸ್ವಾಮಿ, ರಾಜ್ಯ ಕಾರ್ಯದರ್ಶಿ ಟಿ.ಹೆಚ್. ಸುರೇಶ್, ರಾಜ್ಯ ಕಾರ್ಯದರ್ಶಿ ಪ್ರಕಾಶ್ ಪಾಲ್ಗೊಳ್ಳಲಿದ್ದಾರೆ.

## ಅ.9 ರಂದು ಎಸಿ ಕಚೇರಿ ಎದುರು ಧರಣಿ ಸತ್ಯಾಗ್ರಹ

**ದಾವಣಗೆರೆ.ಅ.3:** ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಆವರಗೆರೆ ವಸತಿ ನಿವೇಶನ ರಹಿತ ಸಂತ್ರಸ್ತರಿಗೆ ಪುನರ್ವಸತಿ ಕಲ್ಪಿಸಲು ಒತ್ತಾಯಿಸಿ ಅ.9 ರಂದು ನಗರದ ಎಸಿ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ರಾಜ್ಯ ಸಂಚಾಲಕ ಹೆಚ್. ಮಲ್ಲೇಶ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಾವಣಗೆರೆ ಮಹಾನಗರ ಪಾಲಿಕೆಯ ದನವಿನ ಓಣಿ ಹತ್ತಿರ ಗೋಮಾಳದಲ್ಲಿ ಕಳೆದ 2022ರಲ್ಲಿ ನೂರಾರು ಸಂಖ್ಯೆಯ ವಸತಿ ನಿವೇಶನ ರಹಿತರು ಗುಡಿಸಲು ಕಟ್ಟಿಕೊಂಡು ವಾಸಿಸುತ್ತಿದ್ದಾಗ ಜಿಲ್ಲಾಡಳಿತದ ಮೌಖಿಕ ನಿರ್ದೇಶನದಂತೆ ಬೆಳಗಿನ ಜಾವ 2 ಗಂಟೆ ಸಮಯದಲ್ಲಿ ನಿವಾಸಿಗಳಿಗೆ ಯಾವುದೇ ಮಾಹಿತಿ ಸೂಚನೆ ನೀಡದೇ ಏಕಾಏಕಿ ಮಹಾನಗರ ಪಾಲಿಕೆ ಮತ್ತು ತಾಲ್ಲೂಕು ತಹಶೀಲ್ದಾರರು ಪೊಲೀಸ್ ಬಲದೊಂದಿಗೆ ಜೆ.ಸಿ.ಬಿ. ಯಂತ್ರಗಳ ಸಹಾಯದಿಂದ ವಸತಿ ಗುಡಿಸಲು ಧ್ವಂಸ ಕಾರ್ಯಚರಣೆ ನಡೆಸಿ ಅಮಾಯಕ ಕುಟುಂಬಗಳನ್ನು ಬೀದಿ ಪಾಲುಮಾಡಿ ದೌರ್ಜನ್ಯ ಮೆರೆದಿದ್ದರು ಎಂದರು.

ಇಂತಹ ಆಕಸ್ಮಿಕ ಘಟನೆಯಿಂದ ವಿಚಲಿತಗೊಂಡ ನಿವಾಸಿಗಳ ಮೇಲೆ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದರು ಎಂದು ಆರೋಪಿಸಿ ಬಂದನಕ್ಕೆ ಒಳಪಡಿಸಿದ್ದರು. ಇಂತಹ ಅಕ್ರಮ ಕರ್ತವ್ಯದಿಂದ ಕುಟುಂಬಗಳು ಅಲ್ಲಲ್ಲಿ ಅನುಕೂಲ ಸ್ಥಳದಲ್ಲಿ ವಾಸವಾಗಿದ್ದ ಆವರಗೆರೆ ದನವಿನ ಓಣಿಯಲ್ಲಿ ನಿವಾಸಿಗಳನ್ನು ಪುನಃ ಒಕ್ಕಲೆಬ್ಬಿಸುವ ಹುನ್ನಾರ ಮುಂದುವರೆದಿರುತ್ತದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ.) ಡಾ. ಅಂಬೇಡ್ಕರ್ ವಾದ ದಾವಣಗೆರೆ ಜಿಲ್ಲಾ ಸಮಿತಿ ಮತ್ತು ತಾಲ್ಲೂಕು ಸಮಿತಿ ಆಶ್ರಯದಿಂದ ಅ.9 ರಂದು ದಾವಣಗೆರೆ ಉಪ ವಿಭಾಗಾಧಿಕಾರಿ ಕಛೇರಿ ಎದುರು ವಸತಿ ನಿವೇಶನ ರಹಿತ ಸಂತ್ರಸ್ತರಿಗೆ ಪರಿಹಾರ ಪುನರ್ವಸತಿ ಕಲ್ಪಿಸಲು ಒತ್ತಾಯಿಸಿ ಧರಣಿ ಸತ್ಯಾಗ್ರಹ ಮೂಲಕ ಮನವಿ ಪತ್ರ ಸಲ್ಲಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಜಿ.ಎಸ್.ಲೋಕೇಶ ಪಾಲೇಕಲ್ಲು, ಸಮಾದೆಪ್ಪ, ಚನ್ನಬಸಪ್ಪ, ಗಿರೀಶ ಇತರರು ಇದ್ದರು.

# ರಾಶಿ ಭವಿಷ್ಯ

### ಮೇಷ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ಪ್ರೀತಿಯಲ್ಲಿ ನಿಮ್ಮ ಅಸಭ್ಯ ವರ್ತನೆಗೆ ಕ್ಷಮೆ ಕೋರಿ. ಹೊಸ ಯೋಜನೆಗಳು ಮತ್ತು ವಿಚಾರಗಳನ್ನು ಕಾರ್ಯರೂಪಕ್ಕೆ ತರಲು ಒಳ್ಳೆಯ ದಿನ.

### ವೃಷಭ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಸಾಮಾಜಿಕ ಅಡೆತಡೆಗಳನ್ನು ದಾಟಲು ಸಾಧ್ಯವಾಗುವುದಿಲ್ಲ. ಹಗಲುಗನಸು ನಿಮ್ಮ ಪತನಕ್ಕೆ ಕಾರಣವಾಗುತ್ತದೆ - ಇತರರು ನಿಮ್ಮ ಕೆಲಸ ಮಾಡುತ್ತಾರೆಂದು ನಿರೀಕ್ಷಿಸಬೇಡಿ.

### ಮಿಥುನ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ. ಕೋಪ ಅಲ್ಪಾವಧಿ ಹಾಗೂ ಅದು ನಿಮ್ಮನ್ನು ತೊಂದರೆಯಲ್ಲಿ ಸಿಲುಕಿಸಬಹುದೆಂದು ಅರ್ಥ ಮಾಡಿಕೊಳ್ಳುವ ಸಮಯ. ಕಳೆದ ಸಂತೋಷದ ನೆನಪುಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ. ಚೆನ್ನಾಗಿ ಅರ್ಥಮಾಡಿಕೊಳ್ಳದೇ ಯಾವುದೇ ವ್ಯಾಪಾರ / ಕಾನೂನುಬದ್ಧ ಕಡತಕ್ಕೆ ಸಹಿ ಮಾಡಬೇಡಿ.

### ಕರ್ಕ ರಾಶಿ

ಕ್ರೀಡೆಗಳು ಮತ್ತು ಇತರೆ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ದ್ವೇಷಿಸಿದರೂ ನೀವು ಪ್ರೀತಿ ತೋರಿಸಬೇಕು.

### ಸಿಂಹ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು. ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ. ನಿಮ್ಮ ಪ್ರಿಯತಮೆಗೆ ನಿಮ್ಮ ಅಸಡ್ಡೆಯ ಗಮನ ಮನೆಯಲ್ಲಿ ಒತ್ತಡದ ಕ್ಷಣಗಳನ್ನು ತರಬಹುದು

### ಕನ್ಯಾ ರಾಶಿ

ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು. ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ.

### ತುಲಾ ರಾಶಿ

ನಿಮ್ಮ ಜಗಳಗಂಟ ನಡವಳಿಕೆ ನಿಮ್ಮ ಸಂಬಂಧವನ್ನು ಶಾಶ್ವತವಾಗಿ ಹಾಳು ಮಾಡಬಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿಡಿ. ನೀವು ತೆರೆದ ಮನಸ್ಸನ್ನು ಹೊಂದುವ ಮೂಲಕ ಮತ್ತು ಯಾರಾದರ ವಿರುದ್ಧ ಪೂರ್ವಾಗ್ರಹವನ್ನು ಕೈಬಿಡುವ ಮೂಲಕ ಇದರಿಂದ ಹೊರಬರಬಹುದು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ನೀವು ಸ್ವಲ್ಪ ಪ್ರೀತಿ ಹಂಚಿಕೊಂಡಲ್ಲಿ ಇಂದು ನಿಮ್ಮ ಪ್ರಿಯತಮೆ ನಿಮ್ಮ ದೇವತೆಯಾಗುತ್ತಾಳೆ.

### ವೃಶ್ಚಿಕ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಪ್ರೀತಿಪಾತ್ರರ ಭಾವನೆಗಳನ್ನು ಇಂದು ಅರ್ಥಮಾಡಿಕೊಳ್ಳಿ.

### ಧನು ರಾಶಿ

ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು. ನೀವು ಕುಟುಂಬದಲ್ಲಿ ಒಂದು ಸಂಧಿಗಾರನಂತೆ ವರ್ತಿಸುತ್ತೀರಿ. ಎಲ್ಲರ ಸಮಸ್ಯೆಗಳಿಗೂ ಕಿವಿಗೊಡಿ ಹಾಗೂ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

### ಮಕರ ರಾಶಿ

ಧ್ಯಾನ ಮತ್ತು ಆತ್ಮಸಾಕ್ಷಾತ್ಕಾರ ಪ್ರಯೋಜನಕಾರಿಯಾಗಬಹುದು. ಸಹೋದರ-ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಹ್ತಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಕುಟುಂಬದ ಪರಿಸ್ಥಿತಿ ಇಂದು ನೀವು ಯೋಚಿಸುವ ಹಾಗೆ ಇರುವುದಿಲ್ಲ. ಇಂದು ಮನೆಯಲ್ಲಿ ಯಾವುದೇ ವಿಷಯದ ಬಗ್ಗೆ ಅಪಶ್ರುತಿ ಉಂಟಾಗುವ ಸಾಧ್ಯತೆ ಇದೆ. ಅಂತಹ ಪರಿಸ್ಥಿಯಲ್ಲಿ ನಿಮ್ಮನ್ನು ನಿಯಂತ್ರಿಸಿ.

### ಕುಂಭ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ಹೂಡಿಕೆಗಳನ್ನು ಮಾಡಬಾರದು. ನೀವು ಕಛೇರಿಯಲ್ಲಿ ಹೆಚ್ಚು ಸಮಯ ಕಳೆದರೆ ನಿಮ್ಮ ಮನೆಯ ಜೀವನಕ್ಕೆ ಹಾನಿಯಾಗಬಹುದು. ನಿಮ್ಮ ನಗು ಯಾವುದೇ ಅರ್ಥ ಹೊಂದಿಲ್ಲ ನಗುವಿಗೆ ಧ್ವನಿಯಿಲ್ಲ ನಿಮ್ಮ ಸಂಗವಿಲ್ಲದಿದ್ದಾಗ ಹೃದಯ ಬಡಿಯುವುದನ್ನು ಮರೆಯುತ್ತದೆ.

### ಮೀನ ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಮಕ್ಕಳಿಂದ ಅನಿರೀಕ್ಷಿತ ಸುದ್ದಿ ಸಂತೋಷದ ಕ್ಷಣಗಳನ್ನು ತರುತ್ತದೆ. ನಿಮ್ಮ ಪ್ರೀತಿ ಅಸಮ್ಮತಿಯನ್ನು ಆಮಂತ್ರಿಸಬಹುದು.

# ಕುಂದವಾಡ ಕೆರೆಯಲ್ಲಿ ವಾಯು ವಿಹಾರಿಗಳಿಂದ ಶ್ರಮದಾನ



**ದಾವಣಗೆರೆ;** ನಗರದ ಕುಂದವಾಡ ಕೆರೆಯಲ್ಲಿ ಮಹಾತ್ಮಗಾಂಧೀಜಿ ಮತ್ತು ಲಾಲ್ಬಹದ್ದೂರ್ಶಾಸ್ತ್ರೀಯವರ ಜಯಂತಿ ಅಂಗವಾಗಿ ವಾಯು ವಿಹಾರಿಗಳ ಬಳಗದವರು ಕುಂದವಾಡ ಕೆರೆಯಲ್ಲಿ ಸ್ವಚ್ಛತಾ ಕಾರ್ಯ ನಡೆಸಿದರು.

ನಗರಕ್ಕೆ ಕುಡಿಯುವ ನೀರು ಪೂರೈಸುವ ಕುಂದ ವಾಡಕೆರೆ, ಜಯಂತಿ ಅಂಗವಾಗಿ ಕಿರಿಯ ಸುತ್ತಮುತ್ತ ಸ್ವಚ್ಛವಾಗಿರಬೇಕೆಂದು ಸಂಕಲ್ಪ ಮಾಡಿ ಯೋಗಗುರು ಡಾಕ್ಟರ್ರಘು ಪ್ರಸಾವರ ನೇತೃತ್ವದಲ್ಲಿ ಇಂದು ಕುಂದು ವಾಡವಾಯು ವಿಹಾರಿಗಳು ಸ್ವಚ್ಚತೆಯ ಸಮಾಧಾನ ಮಾಡುವುದರ ಮೂಲಕ ಜಯಂತಿಯನ್ನುಆಚರಿಸಿದರು ನಮ್ಮ ಕೆರೆ ನಮ್ಮ ಜವಾಬ್ದಾರಿ ಕೆರೆಯ ವಾತಾವರಣ ಸ್ವಚ್ಛತೆಯಿಂದ ಕೂಡಿದ್ದಾಗ ಮಾತ್ರ ಪ್ರಶಾಂತತೆಯ ವಾತಾವರಣ ಕಂಡುಕೊಳ್ಳಲು ಸಾಧ್ಯವಾಗುತ್ತದೆಎಂದು

ವಾಯು ವಿಹಾರಿಗಳೇ ಇಂದು ಕೆರೆಯಲ್ಲಿ ಬಿದಿದ್ದ ಪ್ಲಾಸ್ಟಿಕ್, ಕಸವನ್ನು ತೆಗೆದು ಸ್ವಚ್ಛಗೊಳಿಸುವಮೂಲಕ ಶ್ರಮದಾನ ಮಾಡಿದರು.

# ಉದ್ಯೋಗ ಮಾರುಕಟ್ಟೆಗೆ ಅಗತ್ಯವಿರುವ ಕೌಶಲ ಮೈಗೂಢಿಸಿಕೊಳ್ಳಲು ಕರೆ



**ಹಾಸನ:** ಈಗಿನ ಉದ್ಯೋಗ ಮಾರುಕಟ್ಟೆಗೆಅಗತ್ಯವಿರುವ ಕೌಶಲಗಳನ್ನು ಮೈಗೂಢಿಸಿಕೊಳ್ಳಲು ಆದ್ಯತೆ ನೀಡಿಎಂದು ಬೆಂಗಳೂರಿನ ನಾಗಾರ್ಜುನ ಸಮೂಹ ಶಿಕ್ಷಣ ಸಂಸ್ಥೆಗಳ ನಿರ್ದೇಶಕ ಹಾಗೂ ಮಲೆನಾಡುತಾಂತ್ರಿಕ ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿಡಾ. ಎಸ್.ಜಿ.ಗೋಪಾಲಕೃಷ್ಣಅವರು ಸಲಹೆ ನೀಡಿದರು.

ನಗರದ ಮಲೆನಾಡುತಾಂತ್ರಿಕ ಮಹಾವಿದ್ಯಾಲಯದ ಮೆಕ್ಯಾನಿಕಲ್ಎಂಜಿನಿಯರಿಂಗ್ ವಿಭಾಗದ 1980ನೇ ಬ್ಯಾಚ್‌ನ ಹಳೆ ವಿದ್ಯಾರ್ಥಿಗಳ ಸಮ್ಮಿಲನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದಅವರು, ಎಂಜಿನಿಯರಿಂಗ್ ಪದವಿ ವೇಳೆ ಓದುವಎಲ್ಲ ವಿಷಯಗಳೂ ಕೆಲಸಕ್ಕೆ ಸೇರಿದ ನಂತರಉಪಯೋಗಕ್ಕೆ ಬರಲಿವೆ. ಪದವಿ ಓದಿನ ವೇಳೆ ಕಲಿತ ವಿಷಯಗಳು ಉದ್ಯೋಗಕ್ಷೇತ್ರದಲ್ಲಿ ಮುನ್ನಡೆಯಲು ಬೇಕಾದ ಭದ್ರ ಬುನಾದಿ ಒದಗಿಸುತ್ತವೆ. ಹಾಗಾಗಿ ಕಲಿಕೆಯನ್ನು ನಿರ್ಲಕ್ಷಿಸದಿರಿಎಂದು ತಿಳಿ ಹೇಳಿದರು.

ಎಂಜಿನಿಯರಿಂಗ್ ಪದವಿ ವೇಳೆ ಓದಿದ ಹೈಡ್ರಾಲಿಕ್ಸ್ ಮತ್ತು ಫ್ಲ್ಯೂಯಿಡ್ ಮೆಷಿನರಿಯಂತಹ ವಿಷಯ ಪದವಿ ನಂತರ ಪೇಪರ್ ಮಿಲ್‌ನಲ್ಲಿ ಶಿಫ್ಟ್ ಎಂಜಿನಿಯರ್ ಆಗಿ ಕೆಲಸ ಮಾಡಲು ಸಹಕಾರಿಯಾಯಿತು. ಕಾಲೇಜಿನ ಹಳೆಯ ವಿದ್ಯಾರ್ಥಿಗಳು ಮಾರ್ಗದರ್ಶಕರಾಗಿ ಇಂದಿನ ವಿದ್ಯಾರ್ಥಿಗಳಿಗೆ ಸೂಕ್ತ ಸಲಹೆ ಸೂಚನೆಗಳನ್ನು ನೀಡಲಿದ್ದೇವೆ. ಇದಕ್ಕಾಗಿ ಪ್ರಾಂಶುಪಾಲರಾದಡಾ. ಹೆಚ್.ಜೆ.ಅಮರೇಂದ್ರಅವರು'ಮಾರ್ಗದರ್ಶಕ' ಉಪಕ್ರಮ ರೂಪಿಸಿದ್ದಾರೆ ಎಂದು ತಿಳಿಸಿದರು.

# ಸಡಗರ ಸಂಭ್ರಮದ ದಸರಾ ಆಚರಣೆ

**ಹೊನ್ನಾಳಿ :** ನವರಾತ್ರಿ ಮುಗಿದು ಕೋನೆ ದಿನ ವಿಜಯದ ಸಂಕೇತವಾದ ವಿಜಯ ದಶಮಿಯನ್ನು ಪಟ್ಟಣ ಸೇರಿದಂತೆ ಹೊನ್ನಾಳಿ ತಾಲೂಕಿನಾದ್ಯಂತ ಅತ್ಯಂತ ವೈಶಿಷ್ಟ್ಯ ಪೂರ್ಣವಾಗಿ ಗುರುವಾರ ಸಡಗರ ಸಂಭ್ರಮದಿಂದ ಸಂತಸದಿಂದ ದಸರಾ ಹಾಗೂ ಬನ್ನಿಪೂಜೆಯನ್ನು ಆಚರಿಸಿದರು.

ಅವಳಿ ತಾಲೂಕಿನಾದ್ಯಂತ ಎಲ್ಲಾ ದೇವಾಲಯಗಳಲ್ಲಿ ವಿಜಯದಶಮಿಯೊಂದು ವಿಶೇಷ ಪೂಜೆಗಳನ್ನು ಮಾಡಿದರು. ಹಿರೇಕಲ್ಮಠದಲ್ಲಿ ಡಾ. ಒಡೆಯರ್‌ಚನ್ನಮಲ್ಲಿಕಾರ್ಜನ ಶಿವಾಚಾರ್ಯ ಸ್ವಾಮೀಜಿ ನೇತೃತ್ವದಲ್ಲಿ ಕಳೆದ 10 ದಿನಗಳ ಕಾಲ ಪ್ರತಿದಿನ ರಾತ್ರಿ ಶರನ್ನವರಾತ್ರಿ ದಸರಾ ಮಹೋತ್ಸವ ನಿಮಿತ್ತಾ ಶ್ರೀಮಠದಲ್ಲಿ ಪೂಜಾ ಕೈಂಕರ್ಯ ಜೊತೆಯಲ್ಲಿ ದೇವಿ ಪುರಾಣದ ಜೋತೆಗೆ ವಿವಿಧ ಮಠಧೀಶರು,ರಾಜಕಾರಣಿಗಳು ಹಾಗೂ ಧಾರ್ಮಿಕ,ಸಾಮಾಜಿಕ ಆರ್ಥಿಕ,ಕೃಷಿ ಪ್ರಕೃತಿ ಸೇರಿದಂತೆ ವಿವಿಧ ವಿಷಯದ ಬಗ್ಗೆ ವಿಶೇಷ ಉಪನ್ಯಾಸ ಹಾಗೂ ಸಾಂಸ್ಕೃತಿ ಕಾರ್ಯಕ್ರಮಗಳು ನಡೆಯಿತು.

ಶ್ರೀ ಮಠದಲ್ಲಿ ಬುಧವಾರ ಆಯುಧ ಪೂಜೆ ನಡೆಸಿ ಗುರುವಾರ ಸಂಜೆ ಶ್ರೀಮಠದಿಂದ ವಿವಿಧ ಹೂಗಳಿಂದ ಅಲಂಕರಿಸಿದ್ದ ಪಲ್ಲಕ್ಕಿಯಲ್ಲಿ ಡಾ,ಒಡೆಯರ್ ಚನ್ನಮಲ್ಲಿಕಾರ್ಜನ ಶಿವಾಚಾರ್ಯ ಸ್ವಾಮೀಜಿಯವರನ್ನು ಶ್ರೀ ಮಠದಿಂದ ಉತ್ಸವ ಪಲ್ಲಕ್ಕಿ ಮೇಲೆ ಕೂರಿಸಿಕೊಂಡು ಮಠಧ ಆನೆ ಸುಭದ್ರೆ ಮೇಲೆ ಚಂದುಶೇಖರ ಶಿವಾಚಾರ್ಯ ಸ್ವಾಮೀಜಿಯ ಭಾವ ಚಿತ್ರದೊಂದಿಗೆ ಬನ್ನಿ



ಮಂಟಪಕ್ಕೆ ಮೆರವಣಿಗೆ ಹೊರಟಿತು.

ಜೊತೆಗೆ ಪಟ್ಟಣದ ರಾಜಬೀಗಳಲ್ಲಿ ದೇವರ ಉತ್ಸವ ಮೂರ್ತಿಗಳು ಸಹ ವಿವಿಧ ವಾದ್ಯಮೇಳಗಳೊಂದಿಗೆ ಮೆರವಣೆಗೆ ಮೂಲಕ ಪಟ್ಟಣದ ಹೊರವಲಯದಲ್ಲಿರುವ ತುಮ್ಮಿನಕಟ್ಟೆ-ಬಲಮರಿ ರಸ್ತೆಯಲ್ಲಿರುವ ಬನ್ನಿಮಂಟಪ್ಪಕ್ಕೆ ಸಾವಿರಾರು ಭಕ್ತರೊಂದಿಗೆ ಆಗಮಿಸಿತು.

ನಂತರ ಒಡೆಯರ್ ಚನ್ನಮಲ್ಲಿಕಾರ್ಜನ ಶಿವಾಚಾರ್ಯ ಸ್ವಾಮೀಜಿ ಶಮಿ ವೃಕ್ಷಕ್ಕೆ ಪೂಜೆ ಮಾಡಿ, ಬನ್ನಿವೃಕ್ಷಕ್ಕೆ ಸಿಂಹೋಲ್ಲಂಘನಗೈದ ನಂತರ ಸ್ಥಳದಲ್ಲಿದ್ದ ಸಹಸ್ರಾರು ಭಕ್ತರಿಗೆ ಪವಿತ್ರವಾದ ಬನ್ನಿಯನ್ನು ವಿತರಿಸಿ ಭಕ್ತರಿಗೆ ಆಶೀರ್ವಾದ ಮಾಡಿದರು.

ಪಟ್ಟಣದ ವಿವಿಧ ದೇವರುಗಳಾದ ಶ್ರೀ ನೀಲಕಂಠೇಶ್ವರ,ಶ್ರೀವೀರಭದ್ರೇಶ್ವರ,ಶ್ರೀಪಾಂಡ ುರಂಗ ದೇವರು,ಶ್ರೀಮೈಲಾರಲಿಂಗೇಶ್ವರ,ಶ್ರೀ ಗಂಗಮಾಳಮ್ಮದೇವಿ, ದೇವರುಗಳು ಮತ್ತು ಟ್ರಾಕ್ಟರ್ ನಲ್ಲಿ ದೇವಿಯ ಪೋಟೂವನ್ನು ಶೃಂಗರಿಸಿ ಮೆರವಣೆಗೆ ಮೂಲಕ ಬನ್ನಿ ಮಟ್ಟಪಕ್ಕೆ ತರಲಾಗಿತ್ತು.

ಶ್ರೀಗಳಿಂದ ಬನ್ನಿ ಸ್ವಿಕರಿಸಿದ ಭಕ್ತರು ಪಟ್ಟಣದ ದೇವಲಾಯಗಳಿಗೆ ತೆರಳಿ ಬನ್ನಿಪತ್ರೆಯನ್ನು ದೇವರಿಗೆ ಅರ್ಪಿಸಿ ನಂತರ ಗುರು ಹಿರಿಯರಿಗೆ-ಸ್ನೇಹಿತರಿಗೆ ಬನ್ನಿಯನ್ನು ಕೊಟ್ಟು ಭಾಳು ಬಂಗಾರವಾಗಲಿ ಎಂದು ಪರಸ್ಪರ ವಿನಿಮಯ ಮಾಡಿಕೊಂಡರು.

ಕಳೆದ ಹತ್ತು ದಿನಗಳಿಂದ ಹಿರೇಕಲ್ಮಠದ ಶ್ರೀಗಳ ನೇತೃತ್ವದಲ್ಲಿ ಶರನ್ನವರಾತ್ರಿಯ ಪ್ರಯುಕ್ತ ವಿಶೇಷ ಪೂಜೆಗಳು ನಡೆಯುತ್ತಿತ್ತು ಅಲ್ಲದೆ ಪ್ರತಿನಿತ್ಯ ಶ್ರೀದೇವಿಯ ಪಠಣವೂ ನಿತ್ಯ ನಡೆಯಿತು.

ಮದ್ಯ ಕರ್ನಾಟಕದಲ್ಲಿ ಅತೀ ಪ್ರಸಿದ್ದಿ ಪಡೆದಿರುವ ಶ್ರೀಮಠದಲ್ಲಿ ನಡೆದ ಕಾರ್ಯಕ್ರಮಕ್ಕೆ ದಾವಣಗೆರೆ,ಶಿವಮೊಗ್ಗ,ಚಿತ್ರದುರ್ಗ,ಹಾವೇರಿ ಸೇರಿದಮತೆ ವಿವಿಧ ಜಿಲ್ಲೆಗಳಿಂದ ಭಕ್ತರು ಆಗಮಿಸಿ ವಿಶೇಷ ಧಾರ್ಮಿಕಾ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದರು.

# ವಿಶ್ವ ಹೃದಯ ದಿನ : ಎಸ್ ಎಸ್ ನಾರಾಯಣ ಸೂಪರ್ ಸ್ಪೆಷಾಲಿಟಿ ಸೆಂಟರ್‌ನಿಂದ ಉಚಿತ ಇಸಿಜಿ ತಪಾಸಣಾ ಶಿಬಿರ

**ದಾವಣಗೆರೆ:** ಇಲ್ಲಿನ ಎಸ್ ಎಸ್ ನಾರಾಯಣ ಸೂಪರ್ ಸ್ಪೆಷಾಲಿಟಿ ಸೆಂಟರ್ ವಿಶ್ವ ಹೃದಯ ದಿನದ ಅಂಗವಾಗಿ ಉಚಿತ ಇಸಿಜಿ ತಪಾಸಣಾ ಶಿಬಿರವನ್ನು ಅಕ್ಟೋಬರ್ 5ರಂದು ಆಯೋಜಿಸಿದೆ.

ಇತ್ತೀಚೆಗೆ ಒಂದೇ ದಿನದಲ್ಲಿ 11,786 ಮಹಿಳೆಯರಿಗೆ ಉಚಿತ ಇಸಿಜಿ ತಪಾಸಣೆ ಮಾಡುವ ಮೂಲಕ ದಾಖಲೆ ಮಾಡಿದ್ದ ನಾರಾಯಣ ಹೆಲ್ತ್ ಇದೀಗ ತನ್ನ ದಾವಣಗೆರೆಯ ಎಸ್ ಎಸ್ ನಾರಾಯಣ ಸೂಪರ್ ಸ್ಪೆಷಾಲಿಟಿ ಸೆಂಟರ್‌ನಲ್ಲಿಒಂದೇ ದಿನದಲ್ಲಿ ಸಾವಿರಕ್ಕೂ ಅಧಿಕ ಜನರ ಇಸಿಜಿ ತಪಾಸಣೆ ಮಾಡುವ ಧೇಯ್ಯದೊಂದಿಗೆ ತಪಾಸಣಾ ಶಿಬಿರ ಹಮ್ಮಿಕೊಂಡಿದೆ.

ಈ ಶಿಬಿರವೂ ಅಕ್ಟೋಬರ್ 5 ( ಭಾನುವಾರ) ಎಸ್ ಎಸ್ ಹಾಸ್ಪಿಟಲ್ ಸ್ಪೆಷಾಲಿಟಿ ಕ್ಲಿನಿಕ್, ಮೋದಿ ಕಾಂಪೌಂಡ್, ಗುಂಡಿ ಸರ್ಕಲ್ ಹತ್ತಿರ, ದಾವಣಗೆರೆಯಲ್ಲಿ ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೂ ನಡೆಯಲಿದ್ದು. ಇಸಿಜಿ ಅಲ್ಲದೆ ರಕ್ತದೊತ್ತಡ, ರಕ್ತದಲ್ಲಿನ ಸಕ್ಕರೆ ಅಂಶ ತಪಾಸಣೆ ಹಾಗೂ ತಜ್ಞ ವೈದ್ಯರೊಂದಿಗೆ ಸಮಾಲೋಚನೆ ಸಹ ಉಚಿತವಾಗಿರಲಿದೆ.

ಆಸ್ಪತ್ರೆಯ ಹೃದ್ರೋಗ ವಿಭಾಗದ ಮುಖ್ಯಸ್ಥ ಹಾಗೂ ಹೃದ್ರೋಗ ತಜ್ಞ ಡಾ.ಮಲ್ಲೇಶ ಪಿ, ವ್ಯವಸ್ಥಾಪಕ ನಿರ್ದೇಶಕ ಶ್ರೀ ಸುನೀಲ ಭಂಡಾರಿಗಲ್ ಅವರು ದಾವಣಗೆರೆ ಹಾಗೂ ಸುತ್ತಮುತ್ತಲಿನ ಪ್ರದೇಶದ ಜನರು ಈ ಶಿಬಿರದ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 9739345603 / 9980026026 / 88844 31372

# ವಾಹನ ವಿಲೇವಾರಿ

**ಶಿವಮೊಗ್ಗ:** ಶಿವಮೊಗ್ಗ ತುಂಗಾನಗರ ಪೊಲೀಸ್ ಠಾಣೆಯಲ್ಲಿ ವಾರಸ್ಸುದಾರರು ಪತ್ತೆಯಾಗದ 45 ವಿವಿಧ ವಾಹನಗಳನ್ನು ಯಥಾ ಸ್ಥಿತಿಯಲ್ಲಿ ನ್ಯಾಯಾಲಯದ ಆದೇಶದನ್ವಯ ಅ.13 ರಂದು ಬೆಳಿಗ್ಗೆ 09 ಗಂಟೆಗೆ ತುಂಗಾನಗರ ಪೊಲೀಸ್ ಠಾಣಾ ಆವರಣದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

ಹೆಚ್ಚಿನ ಮಾಹಿತಿಗೆ ತುಂಗಾನಗರ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದೆಂದು ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಂಗ್ರೆಸ್ ಪ್ರಚಾರ ಸಮಿತಿಯಿಂದ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತಿ ಅಚರಣೆ

**ಗದಗ:** ನಗರದ ದಿ. ಕಾನ್ ಸೇಲ್ ಸೊಸೈಟಿ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಜಯಂತಿಯನ್ನು ಗುರುವಾರ ಆಚರಿಸಲಾಯಿತು.

ಕೆಪಿಸಿಸಿ ಉಪಾಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಡಿ.ಆರ್. ಪಾಟೀಲ ಅವರು ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಅಹಿಂಸಾ ತತ್ವಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಂಡು ಮುನ್ನಡೆ ಸಾಧಿಸಬೇಕು ಎಂದು ಹೇಳಿದರು.

ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಕೃಷ್ಣಗೌಡ



ಎಚ್. ಪಾಟೀಲ, ಗದಗ ಜಿಲ್ಲಾ ಪರಿಶಿಷ್ಟ ಜಾತಿ ಕಾಂಗ್ರೆಸ್ ವಿಭಾಗದ ಅಧ್ಯಕ್ಷರಾದ ಬಸವರಾಜ ಕಡೆಮನಿ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ-ಬೆಟಗೇರಿ ನಗರಸಭೆ ಮಾಜಿ ಅಧ್ಯಕ್ಷರಾದ ಪ್ರಕಾಶ ಬೊಮ್ಮನಹಳ್ಳಿ, ತಾಪಂ ಮಾಜಿ ಅಧ್ಯಕ್ಷ ವಿದ್ಯಾಧರ ದೊಡ್ಡಮನಿ, ಡಾ. ಅರವಿಂದ ಪಾಟೀಲ, ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಸಾವಿತ್ರಿ ಹೂಗಾರ, ಗದಗ ಬೆಟಗೇರಿ ಆಶ್ರಯ ಸಮಿತಿ ಸದಸ್ಯರಾದ ರೇಖಾ ಜಡಿ, ಮುಖಂಡರಾದ ಚಾಂದಸಾಬ್ ಕೊಟ್ಟೂರ, ಶಿವರಾಜ ಕೋಟಿ, ಸಮೀರ ಕೊಟ್ಟೂರ ಸೇರಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಪಾಲ್ಗೊಂಡಿದ್ದರು.

ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾದ ಅಶೋಕ ಮಂದಾಲಿ ಅವರು ನಿರ್ವಹಿಸಿದರು.

# ಕರ್ನಾಟಕದ ಕಾಫಿಗೆ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ವಿಶೇಷವಾದ ಬೆಲೆ ಇದೆ

**ಚಿಕ್ಕಮಗಳೂರು:** ಕಾಫಿ ಸಂಸ್ಕೃತಿಯನ್ನು ಉಳಿಸಿಕೊಳ್ಳಬೇಕು. ಇಲ್ಲವಾದಲ್ಲಿ ಮುಂದೆ ಉದ್ಯಮಕ್ಕೆ ಬಹಳ ಅಪಾಯ ಕಾದಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಎಚ್ಚರಿಸಿದರು.

ನಗರದ ಆಜಾದ್ ಪಾರ್ಕ್‌ನಲ್ಲಿ ಚಿಕ್ಕಮಗಳೂರು ಜಿಲ್ಲಾ ಬೆಳೆಗಾರರ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಅಂತರರಾಷ್ಟ್ರೀಯ ಕಾಫಿ ದಿನಾಚರಣೆ ಕಾರ್ಯಕ್ರಮದ ಜಾಥಉದ್ಘಾಟಿಸಿ ಮಾತನಾಡಿದರು.

ಈಗ ಹಣ ಇದ್ದವರೆಲ್ಲ ಬಂದು ತೋಟ ಖರೀದಿಸುತ್ತಿದ್ದಾರೆ. ಆರಂಭದಲ್ಲಿ ವಾರಕ್ಕೊಮ್ಮೆ ತೋಟಕ್ಕೆ ಬರುವ ಅವರು ನಂತರ 6 ತಿಂಗಳು, ವರ್ಷಕ್ಕೊಮ್ಮೆ ಬರಲಾರಂಭಿಸಿ ಕ್ರಮೇಣ ತೋಟವನ್ನು ಹಾಳು ಬಿಡುತ್ತಾರೆ. ಹಾಗಾಗಿ ಒಳ್ಳೊಳ್ಳೆ ತೋಟಗಳು ಹಾಳುಬಿದ್ದಿವೆ. ಎಲ್ಲಾದರೂ ತೋಟ ಹಾಳು ಬಿದ್ದಿದ್ದರೆ ಇದಾರೋ ಕಾಫಿ ಕುಟುಂಬಕ್ಕೆ ಸೇರಿದವರದ್ದಲ್ಲ ಎನ್ನುವುದು ಗೊತ್ತಾಗುತ್ತದೆ ಎಂದು ತಿಳಿಸಿದರು.

ಹೀಗಾಗಿ ಕಾರ್ಮಿಕರು, ಮಾಲೀಕರ ನಡುವೆ ಭೇದ ಭಾವವಿಲ್ಲದೆ ನಾವೆಲ್ಲರೂ ಒಂದು ಕುಟುಂಬದವರು ಎಂದು ಭಾವಿಸಿ ಕಾಫಿ ಸಂಸ್ಕೃತಿಯನ್ನು ಉಳಿಸಬೇಕಿದೆ. ಎಲ್ಲರ ಕಷ್ಟ ಸುಖಗಳೊಂದಿಗೆ ಭಾಗಿಗಳಾದಾಗ ಪಾರಿವಾರಿಕ ಸಂಬಂಧ ಉಳಿಸಿಕೊಳ್ಳಲು




ಸಾಧ್ಯವಿದೆ ಎಂದು ತಿಳಿಸಿದರು.

ಕಾಫಿ ಸಂಸ್ಕೃತಿ ಉಳಿಯಬೇಕೆಂದರೆ ತೋಟ ಎಷ್ಟು ಮಾಡುತ್ತೇವೋ ಅಷ್ಟು ಮನೆ ತುಂಬ ಮಕ್ಕಳನ್ನೂ ಮಾಡಿಕೊಳ್ಳಬೇಕು. ಮಕ್ಕಳಿಗೆ ಕಾಫಿ ಕೃಷಿಯ ಬಗ್ಗೆ ಹೇಳಿಕೊಡಬೇಕು. ಇದನ್ನು ಯಾವ ರೀತಿ ಬೇಕಾದರೂ ತೆಗೆದುಕೊಳ್ಳಬಹುದು. ಇಲ್ಲವಾದಲ್ಲಿ ಬರೇ ಕಾಫಿ ಅಷ್ಟೇ ಅಲ್ಲ ದೇಶವೇ ಉಳಿಯುವುದಿಲ್ಲ ಎಂದರು.ಕಾಫಿ ಬೆಲೆ ಹೆಚ್ಚಿದ್ದರೂ ನಿರ್ವಹಣಾ ವೆಚ್ಚ ದುಪ್ಪಟ್ಟಾಗಿದೆ. ಜೊತೆಗೆ ಕಾರ್ಮಿಕರ ಕೊರತೆಯೂ ಇದೆ. ಕಾಲ ಕೆಟ್ಟಾಗಲೂ, ಒಳ್ಳೆಯದಾದಾಗಲೂ ಸಮಚಿತ್ತದಿಂದ ಸ್ವೀಕಾರ ಮಾಡಬೇಕು. ಕರ್ನಾಟಕದ ಕಾಫಿಗೆ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ವಿಶೇಷವಾದ ಬೆಲೆ ಇದೆ. ನೆರಳಿನಲ್ಲಿ, ನೈಸರ್ಗಿಕವಾಗಿ ಬೆಳೆಯುವ ಕಾಫಿ ನಮ್ಮದು. ಅದನ್ನು ಒಂದು ಬ್ರಾಂಡ್ ಆಗಿ ಮಾಡಬೇಕಿದೆ. ಪ್ರತಿ ತೋಟವೂ ಬ್ರಾಂಡ್ ಆಗುವಂತಾಗಬೇಕು ಎಂದರಒಂದು ವಾರ ಕಾಫಿ ಮೇಳವನ್ನು ಮಾಡಿ ಅದು ಬೆಳೆದು ಬಂದ ದಾರಿ ಬಗ್ಗೆ ಹೊರಗಿನವರಿಗೆ ಪರಿಚಯಿಸುವುದರಿಂದ ಪ್ರವಾಸೋದ್ಯಮಕ್ಕೂ ಒತ್ತು ನೀಡಿದಂತಾಗುತ್ತದೆ. ಕಾಫಿಗೆ ಮೌಲ್ಯ ವರ್ಧನೆ ಮಾಡಬೇಕು. ಅದಕ್ಕಾಗಿ ಬೇರೆ ಬೇರೆ ಪ್ರಯೋಗ ಮಾಡಿ ಕಾಫಿಗೆ ಜಾಗತಿಕ ಮಟ್ಟದಲ್ಲಿ ಒಂದು ವೇದಿಕೆ ಕಲ್ಪಿಸುವ ಕೆಲಸ ಮಾಡಬೇಕು. ಆರಂಭಿಕವಾಗಿ ಸರ್ಕಾರದ ನೆರವು ಇದಕ್ಕೆ ಬೇಕಾಗುತ್ತದೆ ಎಂದರು.

# ಸಿದ್ದನಕೊಳ್ಳದಲ್ಲಿ "ಗೀತಕುಸುಮ" ಬಿಡುಗಡೆ

**ಸಿದ್ದನಕೊಳ್ಳ :** ಇಲಕಲ್ ತಾಲೂಕಿನ ನಿರಂತರ ಅನ್ನ ದಾಸೋಹ ಹಾಗೂ ಕಲಾ ಪೋಷಕರಮಠ. ಸುಕ್ಷೇತ್ರ. ಸಿದ್ದನಕೊಳ್ಳದ ಸಿದ್ದಪ್ಪಜ್ಜನ ಮಠದಲ್ಲಿ ದಸರಾ ಮಹೋತ್ಸವ ಅಂಗವಾಗಿ ಕಲಾಪೋಷಕಮಠ ಸಿದ್ದನಕೊಳ್ಳ ಅರ್ಪಿಸುವ "ಗೀತ ಕುಸುಮ". ಕುಂದದ ಸುಮಧುರ ಮನಸುಗಳು ಎಂಬ. ಟ್ಯಾಗ್ ಲೈನ್‌ನೊಂದಿಗೆ ಭಾವಗೀತೆಗಳ ವಿಡಿಯೋ ಆಲ್ಬಂ ಸಾಂಗ್‌ಗಳನ್ನು ಬಿಡುಗಡೆ ಮಾಡಲಾಯಿತು,

ಮುಖ್ಯ ಅತಿಥಿಗಳಾಗಿ ಕಸಾಪ ಗೋವಾ ರಾಜ್ಯಾಧ್ಯಕ್ಷ ಸಿದ್ದಣ್ಣ ಮೇಟಿ, ಲಿಂಗಸೂರಿನ ಅಯ್ಯಣ್ಣಸ್ವಾಮಿ ಗಣಾಚಾರಿ , ಚಲನಚಿತ್ರ ಪತ್ರಕರ್ತ ಡಾ.ಪ್ರಭು ಗಂಜಿಹಾಳ ಆಗಮಿಸಿದ್ದರು. ಅಧ್ಯಕ್ಷತೆಯನ್ನು ಅಮೀನಗಡದ ಸಾಹಿತಿಗಳು ಹಾಗೂ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಮಹದೇವ ಬಸರಕೋಡ ವಹಿಸಿದ್ದರು. ಸಿದ್ದನಕೊಳ್ಳ ಶ್ರೀಮಠದ ಧರ್ಮಾಧಿಕಾರಿಗಳಾದ ಡಾ.ಶಿವಕುಮಾರ ಮಹಾಸ್ವಾಮಿಗಳು ಪೋಸ್ಟರ್ ಲಾಂಚ್ ಮಾಡಿ ಮೂರು ಹಾಡುಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಶ್ರೀಗಳು ಸಿದ್ದನಕೊಳ್ಳ ಮಠ ಕಲಾವಿದರನ್ನು ಬೆಳೆಸಿದ ಮತ್ತು ಬೆಳೆಸುವ ಕಲಾ ಪೋಷಕಮಠ . ಕಲಾಪ್ರತಿಭೆಗಳಿಗೆ ಇಲ್ಲಿ ಪ್ರೋತ್ಸಾಹ ಖಂಡಿತವಾಗಿ ಇದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಬಸರಕೋಡ ಅವರು ಗೀತೆಗಳಿಗೆ ಭಾವಪೂರ್ಣ ಅಭಿನಯವನ್ನು ಕಲಾವಿದರು ನೀಡಿದ್ದಾರೆ ಎಂದರು.

"ಮೂರು ದಿನದ ಬಾಳಿಗೆ" ಎಂಬ. ಭಾವಗೀತೆಗೆ ಶ್ರೀಗಳು ಭಾವಪೂರ್ಣ ಅಭಿನಯ ನೀಡಿದ್ದು ಜೊತೆಗೆ ಅಯ್ಯಣ್ಣಸ್ವಾಮಿ ಶ್ರೀಮತಿ ಪಾರ್ವತಿ ಗಣಾಚಾರಿ, ಭಾವನಾ ,ಬೇಬಿ ಸಹನಾ ,ಬೇಬಿ ಶ್ರೇಯಾ ,ಮಾಸ್ಟರ್ ವೀರೇಶ್ ಅಭಿನಯಿಸಿದ್ದಾರೆ , ಇನ್ನೊಂದು ಭಾವಗೀತೆಗೆ ಚಿತ್ರ ನಟಿ ಅಪ್ಪು ಮಂಜು ಮೂರನೇ ಗೀತೆಗೆ ಎಚ್.ವಿಜಯಲಕ್ಷ್ಮಿ (ಖುಷಿ). ಮತ್ತು ಗುರು ರಾಠೋಡ ನಟಿಸಿದ್ದಾರೆ ,

ಸಾಹಿತ್ಯವನ್ನು ಮಹದೇವ ಬಸರಕೋಡ ರಚಿಸಿದ್ದು, ಸಂಗೀತವನ್ನು ರಾಜೂ ಎಮ್ಮಿಗನೂರ ನೀಡಿದ್ದಾರೆ. ಮಾಲಾಶ್ರೀ ಕಣವಿ ಮತ್ತು ರವೀಂದ್ರ ಸೊರಗಾವಿ ಸುಮಧುರವಾಗಿ ಹಾಡಿದ್ದಾರೆ . ರಾಜೇಶ್ ಪವಾರ. ಛಾಯಾಗ್ರಹಣ, ವಿನಾಯಕ ಬಸವಾ ನೃತ್ಯ ನಿರ್ದೇಶನ ,ಸಿದ್ಧಾರ್ಥ್ ಜಾಲಿಹಾಳ ಸಂಕಲನ , ದೇವು ಕಮ್ಮಾರ ಪ್ರಸಾಧನ ,ನಟರಾಜ ಪತ್ತಾರ ಡಿಸೈನ್ , ಡಾ ಪ್ರಭು ಗಂಜಿಹಾಳ ,ಡಾ.ವೀರೇಶ ಹಂಡಿಗಿ ಪತ್ರಿಕಾ ಸಂಪರ್ಕ, ನಿಖಿಲ್ ಬೇಲೂರು ಮಠ ,ದುರ್ಗಾದೇವಿ ಜಿ ಎಚ್ , ಗಣೇಶ ಜಾಧವ್ ,ರಾಜಪ್ಪ. ಗಜೇಂದ್ರ ಗಡ ಸಹಕಾರವಿದೆ. ಧಾರವಾಡ ಸಮೀಪದ ಮುಗದಕೆರೆ ಸುತ್ತ-ಮುತ್ತ, ಡೋರಿಕೆರೆ , ಹುಲಿಕೇರಿ ಸುಂದರ ಸ್ಥಳಗಳಲ್ಲಿ ಚಿತ್ರೀಕರಣ ಮಾಡಲಾಗಿದ್ದು ಮಹಾಮಹಿಮ ಲಡ್ಡುಮುತ್ಯಾ ಚಲನಚಿತ್ರ ಖ್ಯಾತಿಯ ಅರವಿಂದ. ಮುಳಗುಂದ ನಿರ್ದೇಶನವನ್ನು ಮಾಡಿದ್ದಾರೆ ಇದೆ ಸಂದರ್ಭದಲ್ಲಿ ಭಕ್ತಿಗೀತೆಗಳ ರಸಮಂಜರಿ ಜರುಗಿತು. ಚಿತ್ರನಟ, ಜ್ಯೂನಿಯರ್ ಉಪೇಂದ್ರ ವೀರೇಶ ಪುರವಂತ, ಸೌಮ್ಯ ಬಿಜಾಪುರ,ಸುಮಾ ಹಿರೇಮಠ, ಮಲ್ಲು ಅಮೀನಗಡ, ಸಂಗನಗೌಡ ಕುರುಡಗಿ ಸುಶ್ರಾವ್ಯವಾಗಿ ಹಾಡುಗಳನ್ನು ಹಾಡಿದರು, ಕಾರ್ಯಕ್ರಮದಲ್ಲಿ ಶ್ರೀಮಠದ ಸಂಗಮೇಶ ಹುದ್ದಾರ ಮತ್ತು ಕಲಾವಿದರು, ತಂತ್ರಜ್ಞರು, ಶ್ರೀಮಠದ ಸದ್ಭಕ್ತರು ಪಾಲ್ಗೊಂಡಿದ್ದರು.

## ಸತ್ತಂಗ ಪ್ರವಚನದಿಂದ ಮನಃ ಪರಿವರ್ತನೆ

**ಚಳ್ಳಕೆರೆ:** ಸಂಗದಿಂದ ಸಂಪಾದಿಸುವ ಭಕ್ತಿ ಬದುಕಿಗೆ ದೊಡ್ಡ ಶಕ್ತಿಯಾಗಿ ಕಾಪಾಡುತ್ತದೆ ಎಂದು ಶಾರದಾಶ್ರಮದ ಮಾತಾಜಿ ತ್ಯಾಗಮಯಿ ಹೇಳಿದರು. ನಗರದ ಲಯನ್ಸ್ ಕ್ಲಬ್‌ನಲ್ಲಿ ನವರಾತ್ರಿ ಪ್ರಯುಕ್ತ ಭಾನುವಾರ ಶಾರದಾಶ್ರಮದ ಭಕ್ತ ಮಂಡಳಿ ಆಯೋಜಿಸಿದ್ದ ಸತ್ತಂಗ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಇದು ಪ್ರವಚನ ರೂಪದಲ್ಲಿ ಮನಃ ಪರಿವರ್ತನೆ ಮಾಡುತ್ತದೆ ಎಂದರು. ನವರಾತ್ರಿ ಪೂಜೆಯಲ್ಲಿ ದೇವಿಯನ್ನು ಶೈಲಪುತ್ರಿ, ಬ್ರಹ್ಮಚಾರಿಣಿ, ಚಂದ್ರಘಂಟ, ಕೂಷ್ಮಾಂಡಾ, ಸ್ಕಂದ ಮಾತೆ, ಕಾತ್ಯಾಯಿನಿ, ಕಾಲರಾತ್ರಿ, ಮಹಾಗೌರಿ, ಸಿದ್ಧಿಧಾತ್ರಿಯಾಗಿ ಸ್ಮರಿಸಿ ಆರಾಧನೆ ಮಾಡುತ್ತೇವೆ. ಜತೆಗೆ ಮಹಾಕಾಳಿ, 'ಮಹಾಲಕ್ಷ್ಮಿ, ಮಹಾಸರಸ್ವತಿ ಎಂತಲೂ ಪೂಜಿಸುತ್ತೇವೆ. 10 ತಲೆ ರಾವಣನೆಂಬ ಅಸುರನನ್ನು ಶ್ರೀ ರಾಮಚಂದ್ರ ಸಂಹರಿಸಿದ ವಿಶೇಷ ದಿನವೆಂದು ವಿಜಯದಶಮಿಯಂದು ಪೂಜೆ ಸಲ್ಲಿಸುತ್ತೇವೆ ಎಂದು ತಿಳಿಸಿದರು. ಇದೇ ವೇಳೆ ಮಹಿಳಾ ಭಕ್ತರಿಂದ ಸಾಮೂಹಿಕವಾಗಿ ಶ್ರೀದೇವಿ ವಿಸ್ತುತಿ ಪಾರಾಯಣ ಮತ್ತು ದೇವಿ ಭಜನೆ ನಡೆಯಿತು

## ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಅಗ್ನಿ ಅವಘಡ

**ದಾವಣಗೆರೆ :** ನಗರದ ಹೊಂಡದ ರಸ್ತೆಯ ಮೀನು ಮಾರುಕಟ್ಟೆ ಪಕ್ಕದ ಮನೆಯೊಂದರಲ್ಲಿ ಭಾನುವಾರ ಮಧ್ಯಾಹ್ನ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಅಗ್ನಿ ಅವಘಡ ಸಂಭವಿಸಿದ್ದು, ಒಳಗೆ ಸಿಕ್ಕಿ ಹಾಕಿಕೊಂಡಿದ್ದ ತಾಯಿ ಮತ್ತು ಮಗಳನ್ನು ಅಗ್ನಿಶಾಮಕ ಸಿಬ್ಬಂದಿ ರಕ್ಷಿಸಿದ್ದಾರೆ. ಎರಡನೇ ಮಹಡಿಯಲ್ಲಿದ್ದ ಮನೆಯಲ್ಲಿ ಸಿಬ್ಬಂದಿ ಏಣಿಯನ್ನು ಬಳಸಿ, ಮನೆಯೊಳಗೆ ಸಿಲುಕಿಕೊಂಡಿದ್ದ ತಾಯಿ ಮತ್ತು ಮಗಳನ್ನು ಕಿಟಕಿಯ ಮೂಲಕ ಹೊರಗೆ ಕರೆತಂದರು. ಹೊಗೆ ಸೇವಿಸಿದ್ದರಿಂದ ಅಸ್ವಸ್ಥಗೊಂಡಿದ್ದ ಇಬ್ಬರಿಗೂ ಆರೈಕೆ ಮಾಡಲಾಯಿತು.ಬೆಂಕಿ ಕಾಣಿಸಿಕೊಂಡು ಹೊಗೆ ಆವರಿಸಿದೆ. ದಾವಣಗೆರೆಯ ಹೊಂಡದ ಮನೆಯಲ್ಲಿದ್ದ ಗೀತಾ ಮತ್ತು ಮಧು ರಸ್ತೆಯಲ್ಲಿ ಅಗ್ನಿ ಅವಘಡ ಎಂಬುವರು ಹೊರಗೆ ಬರಲು ಆಗದೇ ಸಂಭವಿಸಿದ ಮನೆಯಿಂದ ಕಿಟಕಿಯ ನಿಂತುಕೊಂಡಿದ್ದರು. ಮಹಿಳೆಯನ್ನು ರಕ್ಷಿಸುತ್ತಿರುವ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಠಾಣೆಯ ಅಗ್ನಿಶಾಮಕ ಸಿಬ್ಬಂದಿ.ಘಟನೆಯಲ್ಲಿ ಗೃಹಬಳಕೆಯ ವಸ್ತುಗಳು, ಮಕ್ಕಳ ಪುಸ್ತಕ, ದಾಖಲಾತಿಗಳು ಸುಟ್ಟಿವೆ.ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿ ಎಂ.ಎನ್. ನಾಗೇಶ, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಮಹಾಲಿಂಗಪ್ಪ ಲಂಗೋಟಿ, ಅಗ್ನಿಶಾಮಕ ಠಾಣಾಧಿಕಾರಿ ಫಕೀರಪ್ಪ ಕೆ. ಉಪ್ಪಾರ ಹಾಗೂ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

## ಇಬ್ಬರು ಕಳವು ಆರೋಪಿಗಳ ಬಂಧನ

**ಮೊಳಕಾಲ್ಮೂರು:** ಮನೆ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿಗಳಿಬ್ಬ ರನ್ನು ಪತ್ತೆ ಹಚ್ಚಿರುವ ಪೊಲೀಸರು ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಮೊಳಕಾಲ್ಮೂರಿನ ಹಲವೆಡೆ 2023ರಲ್ಲಿ ಹಗಲಿನಲ್ಲೇ ಮನೆಗೆ ನುಗ್ಗಿ ಚಿನ್ನಾಭರಣ, ನಗದು ಕಳವು ಮಾಡಿದ್ದ ಆರೋಪಿತರಾದ ಕೂಡ್ಲಿಗಿಯ ಚಿರತಗುಂಡ ಗ್ರಾಮದ ನಾಗರಾಜ, ಮುತ್ತಿಗಾರಹಳ್ಳಿಯ ರಾಜ ಎಂಬುವರನ್ನು ಬಂಧಿಸಿ 40 ಗ್ರಾಂ. ಬಂಗಾರ, 35 ಸಾವಿರ ರೂ. ನಗದು ವಶಪಡಿಸಿಕೊಂಡಿದ್ದಾರೆ.

# ಒಡೆದ ನಾಲೆ; ನೀರು ಪೋಲು

### ನೀರಾವರಿ ಇಲಾಖೆ ನಿರ್ಲಕ್ಷ್ಯವೇ ಕಾರಣ: ರೈತರ ಆರೋಪ

**ಸಾಸ್ವೆಹಳ್ಳಿ:** ಸಮೀಪದ ಕ್ಯಾಸಿನಕೆರೆ ಪಶು ವೈದ್ಯಕೀಯ ಆಸ್ಪತ್ರೆ ಹಿಂಭಾಗ ಭದ್ರಾ ನಾಲೆಯ ಅಕ್ವಡಕ್ ಬುಧವಾರ ರಾತ್ರಿ ಒಡೆದಿದ್ದು, ನೀರು ಹಳ್ಳದ ಮೂಲಕ ನದಿ ಸೇರುತ್ತಿದೆ. ನೀರಾವರಿ ಇಲಾಖೆಯ ನಿರ್ಲಕ್ಷ್ಯವೇ ಇದಕ್ಕೆ ಕಾರಣ ಎಂದು ರೈತರು ಆರೋಪಿಸಿದ್ದಾರೆ.

ಮಾರ್ಚ್ ತಿಂಗಳಲ್ಲಿ ಭದ್ರಾವತಿ ತಾಲ್ಲೂಕಿನ ದಿಗ್ಗೇನಹಳ್ಳಿಯಲ್ಲಿ ಅಕ್ವಡಕ್ ಒಡೆದು ಅಪಾರ ಪ್ರಮಾಣದ – ನೀರು ಪೋಲಾಗಿತ್ತು. ತಿಂಗಳ ನಂತರ ಅದನ್ನು ಸರಿಪಡಿಸಲಾಗಿತ್ತು. ಆಗ ಕೊನೆ ಭಾಗದ ಜಮೀನುಗಳಿಗೆ ಸರಿಯಾದ ಸಮಯದಲ್ಲಿ ನೀರು ಸಿಗದೆ ಭತ್ತದ ಇಳುವರಿ ಕುಂಠಿತಗೊಂಡಿತ್ತು. ಇದರಿಂದ ಕೃಷಿಕರಿಗೆ ನಷ್ಟ ಉಂಟಾಗಿತ್ತು. ಈಗಲೂ ಅದೇ ಪರಿಸ್ಥಿತಿ ನಿರ್ಮಾಣ ಆಗಿದೆ ಎನ್ನುತ್ತಾರೆ ಭಾರತೀಯ ಕಿಸಾನ್ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಕೆ.ಸಿ. ತಿಪ್ಪೇಶ್.

*50 ವರ್ಷಗಳಷ್ಟು ಹಳೆಯದಾದ ಈ ನಾಲೆಯನ್ನು ಬೇಸಿಗೆ ಕಾಲದಲ್ಲಿ ದುರಸ್ತಿ ಮಾಡಿದ್ದರೆ ರೈತರಿಗೆ ನಷ್ಟ ಉಂಟಾಗುತ್ತಿರಲಿಲ್ಲ. ಕ್ಯಾಸಿನಕೆರೆ, ಕುಳಗಟ್ಟೆ, ಹನುಮನಹಳ್ಳಿ, ಸಾಸ್ವೆಹಳ್ಳಿ,



ಸಾಸ್ವೆಹಳ್ಳಿ ಸಮೀಪದ ಕ್ಯಾಸಿನಕೆರೆ ಪಶು ವೈದ್ಯಕೀಯ ಆಸ್ಪತ್ರೆ ಹಿಂಭಾಗ ಭದ್ರಾ ನಾಲೆಯ ಅಕ್ವಡಕ್ ಒಡೆದು ನೀರು ಹಳ್ಳದಲ್ಲಿ ಹರಿಯುತ್ತಿರುವುದು

ಹಿರೇಬಾಸೂರು, ಬೆನಕನಹಳ್ಳಿ, ಕಮ್ಮಾರಗಟ್ಟೆ ಸೇರಿ ಹಲವು ಗ್ರಾಮಗಳ ರೈತರು ಈಗ ತಾನೇ ಭತ್ತ ನಾಟಿ ಮಾಡಿದ್ದಾರೆ. ನಾಲೆ ನೀರು ಸರಿಯಾಗಿ ಸಿಗದಿದ್ದರೆ ಎಳೆಯ ಸಸಿಗಳು ಒಣಗುತ್ತವೆ. ಆಗ ರೈತರ ಜೀವನ ಕಷ್ಟವಾಗುತ್ತ–ದೆ' ಎಂದು ಕೃಷಿಕ ಮಲ್ಲೇಶಚಾರ್ ನೋವಿನಿಂದ ನುಡಿದರು.

'ಶಾಸಕರು ಲಕ್ಷಾಂತರ ರೂಪಾಯಿ ಅನುದಾನ ನೀಡಿ ನಾಲೆಯ ಹೂಳು ತೆಗಿಸಿದರು. ಈ ಸಂದರ್ಭದಲ್ಲಿ

ಅಧಿಕಾರಿಗಳು ಇತ್ತ ಗಮನ ಹರಿಸಿದ್ದರೆ ದುರಸ್ತಿಯಾಗಿ ರೈತರಿಗೆ ನೀರು ಸಿಗುತ್ತಿತ್ತು. ಅಧಿಕಾರಿಗಳು ಸಾರ್ವಜನಿಕರ ಹಣವನ್ನು ಅನಗತ್ಯ ಕೆಲಸಗಳಿಗೆ ಬಳಸುತ್ತಿರುವುದು ಬೇಸರದ ಸಂಗತಿ' ಎಂದು ಕ್ಯಾಸಿನಕೆರೆ ರೈತಪರಮೇಶ್ವರಪ್ಪ ದೂರಿದರು.

## ಉತ್ತರ ಪ್ರದೇಶದಲ್ಲೊಂದು ಮರ್ಯಾದಾ ಹತ್ಯೆ

**ಮುಜಫರ್‌ನಗರ:** ಉತ್ತರ ಪ್ರದೇಶದ ಶಾಮ್ಲಿ ಜಿಲ್ಲೆಯಲ್ಲೊಂದು ಮರ್ಯಾದಾ ಹತ್ಯಾ ಪ್ರಕರಣ ನಡೆದಿದೆ.ಕುಟುಂಬದ ಹೆಸರಿಕೆ ಕಳಂಕ ತಂದ ಆರೋಪದ ಮೇಲೆ ಅಪ್ರಾಪ್ತ 17 ವರ್ಷದ ಬಾಲಕಿಯನ್ನು ಆಕೆಯ ತಂದೆ ಮತ್ತು ಸಹೋದರ ಗುಂಡಿಕ್ಕಿ ಕೊಂದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಉತ್ತರ ಪ್ರದೇಶದ ಶಾಮ್ಲಿ ಜಿಲ್ಲೆಯ ಕಂಧ್ಲಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಅಂಬೆಹ್ತಾ ಗ್ರಾಮದಲ್ಲಿ ಈ ಘಟನೆ ನಡೆದಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಎನ್ ಪಿ ಸಿಂಗ್ ಸುದ್ದಿಗಾರರಿಗೆ ತಿಳಿಸಿದ್ದಾರೆ.12 ನೇ ತರಗತಿಯ ವಿದ್ಯಾರ್ಥಿನಿ ಮುಸ್ಕಾನ್ ಎಂದು ಗುರುತಿಸಲಾದ ಸಂತ್ರಸ್ತೆಯನ್ನು ಆಕೆಯ ತಂದೆ ಜುಲ್ಫಾಮ್ ಮತ್ತು 15 ವರ್ಷದ ಸಹೋದರ ತಮ್ಮ ಮನೆಯ ಮೇಲಿನ ಮಹಡಿಗೆ ಕರೆದೊಯ್ದು, ಅಲ್ಲಿ ಆಕೆಯನ್ನು ಪಿಸ್ತೂಲಿನಿಂದ ಗುಂಡು ಹಾರಿಸಿ ಕೊಂದಿದ್ದಾರೆ ಎಂದು ಸಿಂಗ್ ತಿಳಿಸಿದ್ದಾರೆ.ಭಾರತೀಯ ನ್ಯಾಯ ಸಂಹಿತಾದ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಜುಲ್ಫಾಮ್ ಮತ್ತು ಅವರ ಅಪ್ರಾಪ್ತ ಮಗನ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಎಸ್‌ಪಿ ಹೇಳಿದರು.ಇಬ್ಬರನ್ನೂ ಬಂಧಿಸಲಾಗಿದೆ ಮತ್ತು ಅಪರಾಧದಲ್ಲಿ ಬಳಸಲಾದ ಆಯುಧವನ್ನು ವಶಪಡಿಸಿಕೊಳ್ಳಲಾಗಿದೆ.ಕುಟುಂಬದ ಹೆಸರಿಗೆ ಕಳಂಕ ತಂದಿದ್ದಕ್ಕಾಗಿ ತನ್ನ ಮಗಳನ್ನು ಕೊಂದಿದ್ದಾಗಿ ಆರೋಪಿ ತಂದೆ ಒಪ್ಪಿಕೊಂಡಿದ್ದಾನೆ ಎಂದು ಸಿಂಗ್ ಹೇಳಿದರು.ಸ್ಥಳೀಯರ ಪ್ರಕಾರ, ಮುಸ್ಕಾನ್ ಆ ಪ್ರದೇಶದ ಹುಡುಗನೊಂದಿಗೆ ಸಂಬಂಧ ಹೊಂದಿದ್ದಳು, ಅದನ್ನು ಅವಳ ಕುಟುಂಬ ವಿರೋಧಿಸಿತು. ನಿನ್ನೆ ಸಂಜೆ, ಆಕೆಯ ತಂದೆ ಆಕೆ ಫೋನ್‌ನಲ್ಲಿ ಚಾಟ್ ಮಾಡುವುದನ್ನುನೋಡಿದಾಗ ಕೋಪಗೊಂಡು ಆಕೆಯ ಕೊಲೆ ಮಾಡಲಾಗಿದೆ. ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಎಸ್ಪಿ ಹೇಳಿದರು.

# ನೆರೆಪೀಡಿತ ಪ್ರದೇಶಗಳಲ್ಲಿ ಕಾಳಜಿ ಕೇಂದ್ರ ತೆರೆಯಲು ಎಚ್‌ಡಿಕೆ ಆಗ್ರಹ

**ಬೆಂಗಳೂರು:** ಕಲ್ಯಾಣ ಕರ್ನಾಟಕ ಭಾಗದ ನೆರೆಪೀಡಿತ ಪ್ರತೀ ತಾಲ್ಲೂಕಿನಲ್ಲಿ ಕಾಳಜಿ ಕೇಂದ್ರಗಳನ್ನು ತೆರೆಯಬೇಕು ಮತ್ತು ಎಲ್ಲಾ ತುರ್ತು ಸೌಲಭ್ಯಗಳು ಜನರಿಗೆ ಸುಲಭವಾಗಿ ಲಭ್ಯವಾಗುವಂತೆ ನೋಡಿಕೊಳ್ಳಬೇಕೆಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್‌.ಡಿ. ಕುಮಾರಸ್ವಾಮಿ ಒತ್ತಾಯಿಸಿದ್ದಾರೆ.

ಈ ಸಂಬಂಧ ಎಕ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಕೇಂದ್ರ ಸರ್ಕಾರವು ಕರ್ನಾಟಕದ ಪರವಾಗಿ ದೃಢವಾಗಿ ನಿಲ್ಲುತ್ತದೆ ಎಂದು ಕೇಂದ್ರ ಸಚಿವನಾಗಿ ಖಚಿತ ಭರವಸೆ ನೀಡುಣಜಿಣಇನೆ. ನಮ ಜನರ ಕ್ಷೇಮ ಮತ್ತು ಅವರ ಸುರಕ್ಷಿತ ಜೀವನೋಪಾಯಕ್ಕಾಗಿ ಕಾಳಜಿ ವಹಿಸಿ ಸಾಧ್ಯವಿರುವ ಎಲ್ಲ ಸಹಕಾರವನ್ನೂ ಕೇಂದ್ರವು ನೀಡಲಿದೆ ಎಂದು ಅವರು ಹೇಳಿದ್ದಾರೆಕಲ್ಯಾಣ ಕರ್ನಾಟಕದ ಕಲಬುರಗಿ,

ವಿಜಯಪುರ, ಬೀದರ್, ರಾಯಚೂರು ಮತ್ತು ಕೊಪ್ಪಳ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಭಾರೀ ಪ್ರವಾಹ ಉಂಟಾಗಿ ಜನರು ಅತೀವ ಸಂಕಷ್ಟಕ್ಕೆ ಸಿಲುಕಿರುವ ಸಮಯದಲ್ಲಿ ಪ್ರತಿಯೊಬ್ಬರ



ಜೀವ ರಕ್ಷಣೆ, ಅವರಿಗೆ ಅಗತ್ಯ ಸೌಕರ್ಯ ಕಲ್ಪಿಸುವುದು ಸರ್ಕಾರದ ಆದ್ಯ ಕರ್ತವ್ಯ. ಅವರ ಕ್ಷೇಮಕ್ಕಾಗಿ ಪ್ರಾರ್ಥಿಸುತ್ತೇನೆ ಎಂದಿದ್ದಾರೆ.

ಆಹಾರ, ಕುಡಿಯುವ ನೀರು, ಉಡುಪು, ಹೊದಿಕೆ ಮತ್ತು ತುರ್ತು ಔಷಧಿಗಳ ಸಾಕಷ್ಟು ದಾಸ್ತಾನನ್ನು ವಿಳಂಬವಿಲ್ಲದೆ ಅಷ್ಟೂ ಜಿಲ್ಲೆಗಳಿಗೂ ತಲುಪಿಸಬೇಕು.

ಸಿಬ್ಬಂದಿ ರಕ್ಷಣಾ ಪ್ರಯತ್ನಗಳನ್ನು ತೀವ್ರಗೊಳಿಸಿ ವೃದ್ಧರು, ಮಕ್ಕಳು ಮತ್ತು ಮಹಿಳೆಯರ ರಕ್ಷಣೆಗೆ ಹೆಚ್ಚು ಮುತುವರ್ಜಿ ವಹಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ವಿದ್ಯಾರ್ಥಿಗಳ ಬಗ್ಗೆಯೂ ವಿಶೇಷ ಗಮನ ಹರಿಸಬೇಕು. ಶಾಲೆ, ಹಾಸ್ಟೆಲ್ ಮತ್ತು ಶಿಕ್ಷಣ ಸಂಸ್ಥೆಗಳನ್ನು ತಕ್ಷಣವೇ ತಾತ್ಕಾಲಿಕ ಪರಿಹಾರ–ಆರೋಗ್ಯ

**ವಿಜಯಪುರ, ಬೀದರ್, ರಾಯಚೂರು ಮತ್ತು ಕೊಪ್ಪಳ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಭಾರೀ ಪ್ರವಾಹ ಉಂಟಾಗಿ ಜನರು ಅತೀವ ಸಂಕಷ್ಟಕ್ಕೆ ಸಿಲುಕಿರುವ ಸಮಯದಲ್ಲಿ ಪ್ರತಿಯೊಬ್ಬರ ಜೀವ ರಕ್ಷಣೆ, ಅವರಿಗೆ ಅಗತ್ಯ ಸೌಕರ್ಯ ಕಲ್ಪಿಸುವುದು ಸರ್ಕಾರದ ಆದ್ಯ ಕರ್ತವ್ಯ.ಅವರ ಕ್ಷೇಮಕ್ಕಾಗಿ ಪ್ರಾರ್ಥಿಸುತ್ತೇನೆ ಎಂದಿದ್ದಾರೆ.**

**ಆಹಾರ, ಕುಡಿಯುವ ನೀರು, ಉಡುಪು, ಹೊದಿಕೆ ಮತ್ತು ತುರ್ತು ಔಷಧಿಗಳ ಸಾಕಷ್ಟು ದಾಸ್ತಾನನ್ನು ವಿಳಂಬವಿಲ್ಲದೆ ಅಷ್ಟೂ ಜಿಲ್ಲೆಗಳಿಗೂ ತಲುಪಿಸಬೇಕು. ಸಿಬ್ಬಂದಿ ರಕ್ಷಣಾ ಪ್ರಯತ್ನಗಳನ್ನು ತೀವ್ರಗೊಳಿಸಿ ವೃದ್ಧರು, ಮಕ್ಕಳು ಮತ್ತು ಮಹಿಳೆಯರ ರಕ್ಷಣೆಗೆ ಹೆಚ್ಚು ಮುತುವರ್ಜಿ ವಹಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.**

ಕೇಂದ್ರಗಳನ್ನಾಗಿ ಪರಿವರ್ತಿಸಿ ನೆರೆಪೀಡಿತ ಕುಟುಂಬಗಳು, ಚಿಕ್ಕ ಮಕ್ಕಳು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಲು ಸೂಕ್ತ ವ್ಯವಸ್ಥೆ ಮಾಡಬೇಕು ಎಂದಿದ್ದಾರೆ.

ಜನರ ಪ್ರಾಣ ನಷ್ಟದ ಜೊತೆಗೆ ಈ ಜಿಲ್ಲೆಗಳಲ್ಲಿ ತೀವ್ರ ಬೆಳೆನಷ್ಟ ಮತ್ತು ಹಾನಿ ಸಂಭವಿಸಿದೆ. ರೈತರ ಸ್ಥಿತಿ ಹೃದಯವಿದ್ರಾವಕವಾಗಿದ್ದು, ಅವರಿಗೆ ಸೂಕ್ತ–ಸಕಾಲಿಕ ಪರಿಹಾರ ಒದಗಿಸಬೇಕು.

ಇದರಿಂದ ಅವರು ತಮ ಜೀವನೋಪಾಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ. ಪಶು–ಪ್ರಾಣಿಗಳು ಅತೀವ ಸಂಕಷ್ಟಕ್ಕೆ ತುತ್ತಾಗಿವೆ. ವಿಶೇಷವಾಗಿ ಕೃಷಿ ಸಮುದಾಯದ ಜೀವನಾಡಿಯಾಗಿರುವ ಜಾನುವಾರುಗಳಿಗೆ ಮೇವು, ಆಶ್ರಯ ಮತ್ತು ವೈದ್ಯಕೀಯ ಆರೈಕೆ ಒದಗಿಸಲು ತುರ್ತು ಕ್ರಮ ಕೈಗೊಳ್ಳಬೇಕು.

ಜನಾರೋಗ್ಯ, ಪಶು ಆರೋಗ್ಯ ತಂಡಗಳನ್ನು ಸದಾ ಸನ್ನದ್ಧ ಸ್ಥಿತಿಯಲ್ಲಿಡಬೇಕು ಎಂದು ಅವರು ಸಲಹೆ ಮಾಡಿದ್ದಾರೆ.

ಗೌರಿ ಗಣೇಶ ಹಬ್ಬದ ಸಮಯದಲ್ಲಿ ಬೀದರ್, ವಿಜಯಪುರ, ಯಾದಗಿರಿ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಭಾರೀ ಮಳೆ ಸುರಿದು ಈಗಾಗಲೇ ಸಂಕಷ್ಟಕ್ಕೆ ತುತ್ತಾಗಿವೆ. ಆಯುಧ ಪೂಜೆ,

ದಸರಾ, ದೀಪಾವಳಿಯ ಸಮಯದಲ್ಲಿ ಜನರು ಮತ್ತೆ ತೊಂದರೆ ಅನುಭವಿಸುವಂತೆ ಆಗಬಾರದು. ಆದ್ದರಿಂದ ಪರಿಹಾರ ಕಾರ್ಯಗಳು ನಿರಂತರವಾಗಿ ಮುಂದುವರಿಯಬೇಕು ಎಂದು ಅವರು ಹೇಳಿದ್ದಾರೆ.

ಪರಿಸ್ಥಿತಿಯನ್ನು ಅವಲೋಕಿಸಲು ಮತ್ತು ಪರಿಹಾರ ಕ್ರಮಗಳ ತ್ವರಿತ ಸಮನ್ವಯವನ್ನು ಖಚಿತಪಡಿಸಿಕೊಳ್ಳಲು ನಾನು ಖುದ್ದಾಗಿ ಕಲಬುರಗಿ, ಯಾದಗಿರಿ, ವಿಜಯಪುರ,

ಬೀದರ್ ಮತ್ತು ರಾಯಚೂರು ಜಿಲ್ಲಾಧಿಕಾರಿಗಳೊಂದಿಗೆ ದೂರವಾಣಿಯಲ್ಲಿ ಮಾತುಕತೆ ನಡೆಸಿ ಪರಿಹಾರ ಕಾರ್ಯ, ಆಗಿರುವ ನಷ್ಟದ ಬಗ್ಗೆ ಮಾಹಿತಿ ಪಡೆದು ತುರ್ತು ಕ್ರಮ ವಹಿಸುವಂತೆ ಸೂಚಿಸಿದ್ದೇನೆ ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.

## ಪರಿಶಿಷ್ಟ ಜಾತಿ ಪಟ್ಟಿಗೆ ಮಡಿವಾಳ ಸಮುದಾಯ ಸೇರ್ಪಡೆಗೆ ಸಂಘಟಿತ ಹೋರಾಟ ಅಗತ್ಯ

**ದಾವಣಗೆರೆ:** ಮಡಿವಾಳ ಸಮುದಾಯವು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಮತ್ತು ರಾಜಕೀಯವಾಗಿ ಸ್ಥಾನಮಾನವನ್ನು ಪಡೆಯಬೇಕಾದರೆ, ನಮ್ಮ ಸಮುದಾಯವು ಪರಿಶಿಷ್ಟ ಜಾತಿಯ ವರ್ಗಕ್ಕೆ ಸೇರ್ಪಡೆ ಆಗಬೇಕು. ಇದಕ್ಕಾಗಿ ಸಂಘಟಿತ ಹೋರಾಟ ಅಗತ್ಯ ಎಂದು ಚಿತ್ರದುರ್ಗದ ಜಗದ್ಗುರು ಶ್ರೀಮಾಚಿದೇವ ಮಹಾಸಂಸ್ಥಾನ ಮಠದ ಪೀಠಾಧಿಪತಿಗಳಾದ ಜಗದ್ಗುರು ಡಾ.ಶ್ರೀಬಸವ ಮಾಚಿದೇವ ಮಹಾಸ್ವಾಮಿಗಳು ಕರೆ ನೀಡಿದರು.



ನಗರದ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಬರುವ ಜಿಲ್ಲಾ ಪಂಚಾಯತ ಸಮೀಪದ ಮಡಿಕಟ್ಟೆ (ಧೋಬಿಘಾಟ್) ನಲ್ಲಿ ಆಯೋಜಿಸಲಾಗಿದ್ದ ಶ್ರೀ ಬನ್ನಿ ಮಹಾಂಕಾಳಿ ದೇವಿಯ ಪೂಜಾ ಮಹೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಅನಾದಿ ಕಾಲದಿಂದಲೂ ತುಳಿತಕ್ಕೆ ಒಳಗಾಗಿರುವ ಮಡಿವಾಳ ಸಮುದಾಯವು ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿ ಸೇರಬೇಕೆಂದು ಹಲವಾರು ವರ್ಷಗಳಿಂದ ಹೋರಾಟ ಮಾಡುತ್ತಾ ಬರುತ್ತಿದೆ.

ಅಂತೆಯೇ ನಾವುಗಳು

ಎಸ್ಸಿ ವರ್ಗಕ್ಕೆ ಸೇರುವ ಬಗ್ಗೆ ಸಂಘಟಿತರಾಗಿ ಹೋರಾಡಬೇಕು. ಆ ಮೂಲಕ ನಮ್ಮ ಸಮುದಾಯ ಈಗ ಹಾಲಿ ಇರುವ ಸರಕಾರದ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈಗ ರಾಜ್ಯ ಸರ್ಕಾರ ನಡೆಸುತ್ತಿರುವ ಜಾತಿ ಗಣತಿಯಲ್ಲಿ ನಮ್ಮ ಸಮಾಜದ ಜನರು ಜಾತಿ ಗಣುತಿಯಲ್ಲಿ ಮಡಿವಾಳ ಎಂದು ಬರೆಸಿ ಬೇಕು ಎಂದು ಕರೆ ನೀಡಿದರು.

ದಾವಣಗೆರೆಯಲ್ಲಿ ಜಿಲ್ಲಾ ಮಂತ್ರಿ ಎಸ್ ಎಸ್ ಮಲ್ಲಿಕಾರ್ಜುನ ಅವರು ಸಮುದಾಯದ ಜನರ ಏಳಿಗೆಗಾಗಿ ವಿದ್ಯಾರ್ಥಿ ನಿಲಯ, ದೋಭಿಘಾಟ್ ಗೆ ಸೇರಿ ಒಟು 6 ಕೋಟಿ ರೂಪಾಯಿ ನೀಡಿದ್ದಾರೆ. ಇವತ್ತು ಕೂಡ ನೆಲಕ್ಕೆ ಕಾಂಕ್ರೀಟ್ ಹಾಕಿಸಲು ಮತ್ತು ನೆರಳಿನ ಮೇಲ್ಛಾವಣಿಗೆ ಬಣ್ಣ ಒಡೆಯಲು, 24*7 ಕರೆಂಟ್ ಸಂಪರ್ಕ ಕಲ್ಪಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸುವಂತೆ ಆಪ್ತ ಸಹಾಯಕರಿಗೆ ತಿಳಿಸಿದ್ದಾರೆ. ಇಂತಹ ರಾಜಕಾರಣಿಗಳು ನಮ್ಮ ಸಮಾಜಕ್ಕೆ ಸಿಕ್ಕರೆ ಸೌಭಾಗ್ಯ ಇವರೊಟ್ಟಿಗೆ ಸಮಾಜ ಎಂದು ಕೂಡ ಚಿರಋಣಿಯಾಗಿರಬೇಕು ಎಂದು ಕರೆಕೊಟ್ಟರು.

ಸಮಾಜ ಬಾಂಧವರು ತಮ್ಮ ಕಾಯಕದ ಜೊತೆಗೆ ತಮ್ಮ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸವನ್ನು ಕೊಡಬೇಕು. ನಮ್ಮ ಕುಲ ಕಸುಬು ನಮಗೆ ಶ್ರೇಷ್ಠ ಎಂದು ಅರಿತಿರಬೇಕು. ನಾವು ಮಾಡುವ ವೃತ್ತಿಯ ಜಾಗ ನಮಗೆ ದೇವಸ್ಥಾನ ಇದ್ದಂತೆ. ನಾವು ನಮ್ಮ ಜಾಗಕ್ಕೆ ಬರುವಾಗ ಸಂಸ್ಕಾರದಿಂದ ನಮಸ್ಕರಿಸಿ ಬಂದಾಗ ನಮ್ಮೆಲ್ಲ ಸಂಕಷ್ಟಗಳು ನಿವಾರಣೆ ಆಗುತ್ತವೆ ಎಂದು ತಿಳಿಸಿದರು.

ಬಸವೇಶ್ವರ ಕಾಲದಲ್ಲಿ ನಮ್ಮ ಸಮುದಾಯದ ತಂದೆ ಮಡಿವಾಳ ಮಾಚಿದೇವರು ಶರಣರ ಬಟ್ಟೆಗಳನ್ನು ಮಡಿ ಮಾಡಿ ಕೊಡುವುದು ನನ್ನ ಕಾಯಕವೆಂದು ಹೇಳಿ ದುಷ್ಟರನ್ನು ಶಿಕ್ಷಿಸಿದಂತಹ,

ಶಿವದೇವರ ಆದೇಶದಂತೆ ಕೆಲಸ ಮಾಡಿದಂತ ಧೀಮಂತ ನಾಯಕರಾದ ಮಾಚಿದೇವರ ಕುಲದಲ್ಲಿ ನಾವುಗಳು ಹುಟ್ಟಿರುವುದೇ ಸೌಭಾಗ್ಯ. ನಮ್ಮ ಕಸಬು ಕೀಳಲ್ಲ ಎಂಬುವ ಭಾವನೆಯಲ್ಲಿ ನಾವೆಲ್ಲಾ ದುಡಿಯಬೇಕು. ಮಾಚಿದೇವರು ಅಂದು ಬಿಜ್ಜಳರ ಸೈನ್ಯವನ್ನು ಹಿಮ್ಮೆಟ್ಟಿಸಿ ಅಣ್ಣ ಬಸವಣ್ಣ, ಅಕ್ಕಮಹಾದೇವಿಯವರ ಸಹಕಾರದೊಂದಿಗೆ ವಚನ ಸಾಹಿತ್ಯ ಭಂಡಾರವನ್ನು ಸಂರಕ್ಷಿಸಿದ ಧೀಮಂತ ನಾಯಕ ಎಂದು ಸ್ಮರಿಸಿದರು.

ಜಿಲ್ಲಾ ಉಸ್ತುವಾರಿ ಮಂತ್ರಿ ಎಸ್. ಎಸ್. ಮಲ್ಲಿಕಾರ್ಜುನ್ ಮಾತನಾಡಿ, ಕಾಂಗ್ರೆಸ್ ಸರ್ಕಾರವು ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಸದಾ ಶ್ರಮಿಸುತ್ತಿದೆ. ಈ ನಿಟ್ಟಿನಲ್ಲಿ ಮಡಿವಾಳ ಸಮುದಾಯವು ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆಯಬೇಕು.

ಅಲ್ಲದೇ ದೇವರಾಜ ಅರಸು ಬಡಾವಣೆಯಲ್ಲಿ ನಿರ್ಮಿಸುತ್ತಿರುವ ಬಾಲಕರ ವಸತಿ ನಿಲಯವನ್ನು ಪೂರ್ಣ ಗೊಳಿಸಿ, ಜೆ.ಹೆಚ್.ಪಟೇಲ್ ಬಡಾವಣೆಯಲ್ಲಿ ನೀಡಲಾಗಿರುವ ಬಾಲಕಿಯರ ವಸತಿ ನಿಲಯಕ್ಕೆ ಕಾಮಗಾರಿ ಆರಂಭಿಸಿ, ಆ ಮೂಲಕ ಸಮುದಾಯದ ಮಕ್ಕಳನ್ನು ಶಿಕ್ಷಿತರನ್ನಾಗಿ ಮಾಡಿ ಎಂದು ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ , ಮಡಿವಾಳ ಮಾಚಿದೇವ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಹೆಚ್.ಜಿ.ಉಮೇಶ್ ಅವರಗೆರೆ,

ಮುದೇಗೌಡರ ಗಿರೀಶ್, ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಮಂಜುನಾಥ್ ಗಡಿಗುಡಾಳ್, ಮಂತ್ರಿಗಳ ಆಪ್ತ ಸಹಾಯಕ ನಾಗರಾಜ್, ರಮೇಶ್, ಸಮಾಜದ ಮುಖಂಡರಾದ ಓಂಕಾರಪ್ಪ, ರಾಷ್ಟ್ರೀಯ ಯೋಗಪಟು ಡಾ.ಎನ್.ಪರಶುರಾಮ್, ದುಗ್ಗಪ್ಪ, ಗುಡ್ಡಪ್ಪ, ರುದ್ರೇಶ್, ಪಿ.ಮಂಜುನಾಥ್, ಕೋಗುಂಡೆ ಸುರೇಶ್, ಕುಮಾರ್, ರವಿ ಕುಮಾರ್, ಪ್ರವೀಣ್, ಪಕ್ಕೀರಸ್ವಾಮಿ, ಹಿರಿಯರಾದ ಮಲ್ಲೇಶಪ್ಪ, ನಾಗಮ್ಮ, ಮಂಗಳಮ್ಮ ಇತರರಿದ್ದರು.

## ನಾಗರೀಕರು ಸ್ವಚ್ಚತೆಗೆ ಆದ್ಯತೆ ನೀಡಿ: ಶ್ರೇಯಸ್ ಪಟೇಲ್

**ಹಾಸನ :** ಸಾರ್ವಜನಿಕರು ನಮ್ಮ ಮನೆಯನ್ನು ಸ್ವಚ್ಛವಾಗಿಟ್ಟುಕೊಳ್ಳುವ ರೀತಿಯಲ್ಲಿಯೇ ನಗರ, ಪಟ್ಟಣಗಳನ್ನು ಸ್ವಚ್ಚವಾಗಿಟ್ಟುಕೊಳ್ಳಲು ಕೈಜೋಡಿಸುವ ಮೂಲಕ ಸ್ವಚ್ಚತೆಗೆಆದ್ಯತೆನೀಡಬೇಕು. ಸ್ವಚ್ಚತೆಕಾಪಾಡುವ ದುಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರಜವಾಬ್ದಾರಿಯಾಗಿದೆಎಂದು ಸಂಸದರಾದ ಶ್ರೇಯಸ್ ಪಟೇಲ್ಅವರು ತಿಳಿಸಿದ್ದಾರೆ.



ಜಿಲ್ಲಾಡಳಿತದ ವತಿಯಿಂದ ಮಹಾತ್ಮಗಾಂಧೀಜಿಅವರಜಯಂತಿ ಹಾಗೂ ಭಾರತದ ಮಾಜಿ ಪ್ರಧಾನಿ ದಿವಂಗತ ಲಾಲ್ ಬಹದ್ದೂರ್ ಶಾಸ್ತ್ರೀಯವರ ಜಯಂತಿ ಹಿನ್ನೆಲೆಯಲ್ಲಿಇಂದು ಬೆಳಗ್ಗೆ ಡೈರಿ ವೃತ್ತದಿಂದಏರ್ಪಡಿಸಲಾಗಿದ್ದ ಶ್ರಮದಾನಕಾರ್ಯಕ್ರಮದಲ್ಲಿ ಭಾಗವಹಿಸಿ ಸ್ವತಃ ಸ್ವಚ್ಚತಾಕಾರ್ಯ ಮಾಡಿ ಮಾತನಾಡಿದಅವರು ನಾವು ಹೇಗೆ ಪ್ರತಿನಿತ್ಯ ಸ್ನಾನ ಮಾಡಿ ಸ್ವಚ್ಛವಾಗಿರುತ್ತೇವೆಅದೇರೀತಿ ನಗರದ ಸ್ವಚ್ಛತೆಗೂ ಗಮನಹರಿಸಿ ಎಲ್ಲೆಂದರಲ್ಲಿಕಸವನ್ನು ಹಾಕದೆ ಪೌರಕಾರ್ಮಿಕರಿಗೆ ನೆರವಾಗಬೇಕುಎಂದರು.

ಮಹಾತ್ಮಗಾಂಧೀಜಿಅವರತತ್ವ ಸಿದ್ಧಾಂತ ಪಾಲನೆ ಮಾಡಬೇಕು. ಅವರುಶಾಂತಿದೂತರು. ಸ್ವಚ್ಛತೆಗೆ ಹೆಚ್ಚಿನಆಧ್ಯತೆ ನೀಡುತ್ತಿದ್ದರು. ನಾವೆಲ್ಲರೂಅವರದಾರಿಯಲ್ಲಿ ಸಾಗುವ ಮೂಲಕ ಸ್ವಚ್ಚಕಾಪಾಡೋಣಎಂದರಲ್ಲದೆ, ಪ್ರತಿ ದಿನ ಎಲ್ಲರೂ ಶ್ರಮದಾನ ಮಾಡಬೇಕುಎನ್ನುವುದುಗಾಂಧೀಜಿಅವರಆಶಯವಾಗಿತ್ತು. ಆ ನಿಟ್ಟಿನಲ್ಲಿ ನಾವೆಲ್ಲರೂ ವಾರಕ್ಕೆಒಮ್ಮೆಯಾದರೂ ಶ್ರಮದಾನ ಮಾಡಬೇಕುಎಂದರು.

ಜಿಲ್ಲಾಧಿಕಾರಿ ಲತಾಕುಮಾರಿಅವರು ಶ್ರಮದಾನದಲ್ಲಿ ಭಾಗವಹಿಸಿ ಮಾತನಾಡಿಕೆರೆಗಳ ಪಕ್ಕ ಹಾಗೂ ರಸ್ತೆಗಳ ಅಕ್ಕಪಕ್ಕದಲ್ಲಿ ಕಸ ಹಾಕಬಾರದು, ಅವುಗಳು ನಮ್ಮ ಆಸ್ತಿ, ನಾಗರಿಕರುಜವಾಬ್ದಾರಿಯಿಂದ ಸ್ವಚ್ಚವಾಗಿ ಇಟ್ಟುಕೊಳ್ಳುವುದರ ಮೂಲಕ ತಮ್ಮಕರ್ತವ್ಯ ಮತ್ತುದೇಶ ಪ್ರೇಮವನ್ನು ಮೆರೆಯಬೇಕುಎಂದು ತಿಳಿಸಿದರು.

ನಮ್ಮದೇಶ ಮತ್ತು ನಗರಗಳು ಸ್ವಚ್ಛವಾಗಿರಲು ಸಫಾಯಿ ಕರ್ಮಚಾರಿಗಳೇ ಕಾರಣಅವರಿಗೆ ಧನ್ಯವಾದಗಳನ್ನು ತಿಳಿಸುತ್ತೇನೆ ಎಂದಅವರುಕಸವನ್ನುಮೂಲದಲ್ಲಿಯೇ ಹಸಿ ಕಸ, ಒಣ ಕಸವನ್ನು ಬೇರ್ಪಡಿಸಿ ನೀಡುವುದರ ಮೂಲಕ ನಾಗರೀಕರುತಮ್ಮಜವಾಬ್ದಾರಿಯನ್ನು ನಿರ್ವಹಿಸಬೇಕು ಎಂದರು.

ಪ್ಲಾಸ್ಟಿಕ್ಅನ್ನು ಮೂಲದಲ್ಲಿಯೇ ಬೇರ್ಪಡಿಸಿ ಪ್ರತ್ಯೇಕವಾಗಿ ಸಂಗ್ರಹ ಮಾಡಲುಕ್ರಮವಹಿಸುವಂತೆ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಹಾಸನ ಜಿಲ್ಲೆಯನ್ನು ಸ್ವಚ್ಚತೆಯಲ್ಲಿಉತ್ತಮ ಸ್ಥಾನಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮವಹಿಸುವಂತೆ ನಿರ್ದೇಶನ ನೀಡಿದರು.

ಮಹಾನಗರ ಪಾಲಿಕೆಯ ಮಹಾಪೌರರಾದಗಿರೀಶ್‌ಚೆನ್ನವೀರಪ್ಪಅವರು ಮಾತನಾಡಿ ನಾಗರೀಕರು ನಗರದ ಸ್ವಚ್ಚತೆಗೆ ಹೆಚ್ಚಿನ ಸಹಕಾರ ನೀಡಬೇಕುಎಂದು ಮನವಿ ಮಾಡಿದರು.

ಉಪ ಮೇಯರ್ ಹೇಮಾವತಿಅವರು ಮಾತನಾಡಿ ಸಾರ್ವಜನಿಕರುಕಸವನ್ನುಎಲ್ಲೆಂದರಲ್ಲಿ ಬಿಸಾಡದೆತಮ್ಮ ಮನೆಯ ಬಳಿ ಬರುವ ಪಾಲಿಕೆಯಕಸದ ವಾಹನಕ್ಕೆ ಕಸವನ್ನು ಹಾಕುವುದರ ಮೂಲಕ ನಗರದ ಸ್ವಚ್ಚತೆಗೆ ಸಹಕರಿಸಬೇಕುಎಂದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್‌ಕುಮಾರ್, ಮಹಾನಗರ ಪಾಲಿಕೆಯಆಯುಕ್ತರಾದಕೃಷ್ಣ ಮೂರ್ತಿ, ಕಾರ್ಯಪಾಲಕಅಭಿಯಂತರರಾದಚನ್ನೇಗೌಡ, ಸಣ್ಣ ನೀರಾವರಿಇಲಾಖೆಯಕಾರ್ಯಪಾಲಕ ಅಭಿಯಂತರರಾದರಾಮಚಂದ್ರ ಮತ್ತಿತರರು ಶ್ರಮದಾನದಲ್ಲಿ ಭಾಗವಹಿಸಿದ್ದರು.

## ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತರಿಗೆ ನಗದು ಬಹುಮಾನ ವಿತರಣೆ

**ಹಾಸನ :** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಇಲಾಖೆಯ ವತಿಯಿಂದ ಮಹಾತ್ಮಗಾಂಧೀಜಿಯವರ 156ನೇ ಜಯಂತಿಯ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ/ಸ್ನಾತಕೊತ್ತರ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದಲ್ಲಿಏರ್ಪಡಿಸಲಾಗಿದ್ದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ ಬಹುಮಾನ 3000/–, ದ್ವಿತೀಯ ಬಹುಮಾನ 2000/–, ತೃತೀಯ ಬಹುಮಾನ 1000/– ರೂ. ನಗದು ಬಹುಮಾನನ್ನುಇಂದು ನಗರದಗಾಂಧಿ ಭವನದಲ್ಲಿ ನಡೆದಗಾಂಧಿಜಯಂತಿಕಾರ್ಯಕ್ರಮದಲ್ಲಿ ವಿತರಿಸಲಾಯಿತು.

ಪ್ರೌಢಶಾಲಾ ವಿಭಾಗದಲ್ಲಿಚನ್ನರಾಯಪಟ್ಟಣತಾಲ್ಲೂಕುಉದಯಪುರದ ಕೆ.ಪಿ.ಎಸ್ ಶಾಲೆಯ ನಿತ್ಯ ಪ್ರಥಮ ಬಹುಮಾನ,ಆಲೂರುತಾಲ್ಲೂಕುಕಣತ್ತೂರಿನಕಿರಣ್‌ಆಂಗ್ಲ ಮಾಧ್ಯಮ ಶಾಲೆಯ(ಪ್ರೌಢ ಶಾಲಾ ವಿಭಾಗದ) ಗ್ರೀಷ್ಮಾದ್ವಿತೀಯ ಬಹುಮಾನ,ಬೇಲೂರುತಾಲ್ಲೂಕಿನ ಸರ್ವೋದಯಪ್ರೌಢ ಶಾಲೆಯಆದಿತ್ಯಗೌಡ ವಿ ತೃತೀಯ ಬಹುಮಾನ ನೀಡಲಾಯಿತು.

ಪದವಿ ಪೂರ್ವ ವಿಭಾಗದಲ್ಲಿಹಾಸನದಬಾಲಕಿಯರ ಸರ್ಕಾರಿ ಪದವಿ ಪೂರ್ವಕಾಲೇಜಿನಕುಮಾರಿಜಿ. ಜೆಪ್ರಥಮ ಬಹುಮಾನ, ಹಾಸನದಬಾಲಕರ ಸರ್ಕಾರಿ ಪದವಿ ಪೂರ್ವಕಾಲೇಜಿನಸುಹಾಸ್‌ಐ. ಆರ್‌ದ್ವಿತೀಯ ಬಹುಮಾನ, ಹಾಸನದ ಮಾಸ್ಟರ್ಸ್ ಪಿ.ಯುಕಾಲೇಜಿನಲಿಪಿಕ ಹೆಚ್.ಸಿತೃತೀಯ ಬಹುಮಾನ ನೀಡಲಾಯಿತು.

ಪದವಿ ಮತ್ತು ಸ್ನಾತಕೋತ್ತರ ವಿಭಾಗದಲ್ಲಿಹೊಳೆನರಸೀಪುರ ತಾಲ್ಲೂಕು ಪಡವಲಹಿಪ್ಪೆಯ ಹೆಚ್.ಡಿದೇವೇಗೌಡಸರ್ಕಾರಿ ಪ್ರಥಮದರ್ಜೆಕಾಲೇಜಿನಸುಶ್ಮಿತ ಎಸ್. ಆರ್ ಪ್ರಥಮ ಬಹುಮಾನ,ಚನ್ನರಾಯ ಪಟ್ಟಣತಾಲ್ಲೂಕಿನ ಶ್ರೀ ಆದಿಚುಂಚನಗಿರಿ ಪ್ರಥಮದರ್ಜೆಕಾಲೇಜಿನ ಭವ್ಯಶ್ರೀ ದ್ವಿತೀಯ ಬಹುಮಾನ, ಹಾಸನದ ಕುವೆಂಪು ಪ್ರಥಮದರ್ಜೆಕಾಲೇಜಿನಕೆ.ಆರ್ ಸೌಮ್ಯಅವರಿಗೆತೃತೀಯ ಬಹುಮಾನವನ್ನು ವಿತರಿಸಲಾಯಿತು.

## ಸತ್ಯ ಮತ್ತು ಅಹಿಂಸೆ ಸಾರ್ವಕಾಲಿಕ ಜೀವನ ಮೌಲ್ಯಗಳು

**ಚನ್ನಪಟ್ಟಣ :** ಭಾರತ ಸ್ವಾವಲಂಬಿಯಾಗಿ ಸರ್ವತೋಮುಖ ಅಭಿವೃದ್ಧಿಯಾಗಬೇಕೆಂಬ ಕನಸು ಕಂಡಿದ್ದ ಮಹಾತ್ಮಾ ಗಾಂಧೀಜಿ ಅವರು ನುಡಿದಂತೆ ನಡೆದು ನಡೆದಂತೆ ನುಡಿದು ತಮ್ಮ ಬದುಕನ್ನು ಮಾನವಕುಲದ ಶ್ರೇಯಸ್ಸಿಗೆ ಮುಡಿಪಾಗಿಟ್ಟಿದ್ದ ಮಹಾಸಂತರಾಗಿದ್ದು, ಅವರ ಸತ್ಯ, ಅಹಿಂಸೆ, ಸತ್ಯಾಗ್ರಹ, ಸರಳತೆ, ಕ್ಷಮೆ ಮುಂತಾದ ಸಂದೇಶಗಳು ಸಾರ್ವಕಾಲಿಕ ಜೀವನ ಮೌಲ್ಯಗಳಾಗಿವೆ ಎಂದು ಪ್ರೊ. ಸುಧಾ ಕೌಜಗೇರಿ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಮಹಾತ್ಮಾ ಗಾಂಧಿ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತ ಅವರ ಸರಳ, ಸಜ್ಜನ ಬದುಕೇ ಅವರ ಸಂದೇಶವಾಗಿದ್ದು, ಅವರ ಜೀವನ ಮೌಲ್ಯಗಳನ್ನು ಅರ್ಥೈಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ಇತಿಹಾಸ ಪ್ರಾಧ್ಯಾಪಕ ಮತ್ತು ಎನ್.ಎಸ್.ಎಸ್. ಘಟಕದ ಸಂಯೋಜಕ ಪ್ರೊ. ಅಪ್ಪಣ್ಣ




ಹಂಜೆ ಗಾಂಧೀಜಿ ಅವರ 'ಸಶಸ್ತ್ರ ಶಕ್ತಿಗಿಂತ ನಿರಾಯುಧ ಅಹಿಂಸೆಯ ಶಕ್ತಿ ಶ್ರೇಷ್ಠವಾದುದು ಮತ್ತು ಕ್ರೌರ್ಯವನ್ನು ಕ್ರೌರ್ಯದಿಂದ ಎದುರಿಸುವುದು ನೈತಿಕ ಅವನತಿಗೆ ಕಾರಣವಾಗುತ್ತದೆ' ಎಂಬ ಸಂದೇಶಗಳನ್ನು ಮಾನವಕುಲ ಅರ್ಥೈಸಿಕೊಂಡರೆ ಸಮಾಜದಲ್ಲಿ ಶಾಂತಿ, ಸಹಬಾಳ್ವೆ, ಸಾಮರಸ್ಯ, ಭಾವೈಕ್ಯತೆ ಸಾಧ್ಯವೆಂದು ಹೇಳಿದರು. ಪ್ರೊ. ಲಕ್ಷ್ಮಣ ಮುಳಗುಂದ, ಡಾ. ಎಂ.ವೈ. ಜಟ್ಟೆಣ್ಣವರ, ಪ್ರಶಾಂತ ಹುಲಕುಂದ ಗಾಂಧೀಜಿ ಅವರ ಜೀವನ ಮೌಲ್ಯಗಳ ಕುರಿತು ಮಾತನಾಡಿದರು. ಬಸವರಾಜ ಬಳಗಾನೂರಮಠ ವಂದನಾರ್ಪಣೆಗೈದರು. ರಮೇಶ ಹುಲಕುಂದ ಕಾರ್ಯಕ್ರಮ ನಡೆಸಿಕೊಟ್ಟರು.

# ಬೆನ್ನು- ಕೀಲು ನೋವಿಗೆ 'ಆಕಾಶ'ದ ಧೃವತಾರೆ

ಬೆನ್ನು ಮತ್ತು ಕೀಲು ನೋವಿಗೆ ಸಂಬಂಧಿಸಿದಂತೆ ದೇಶ- ವಿದೇಶದಲ್ಲಿ ವಿದ್ಯಾಭ್ಯಾಸ ಮತ್ತು ಅಧ್ಯಯನ ನಡೆಸಿ ಸಾವಿರಕ್ಕೂ ಅಧಿಕ ಯಶಸ್ವಿ ಶಸ್ತ್ರ ಚಿಕಿತ್ಸೆ ನಡೆಸಿರುವ ಡಾ. ಆಕಾಶ್ ಹೊಸ್ತೋಟ ಅವರು ಪರಿಣಿತ ವೈದ್ಯರಾಗಿ ಹೊರಹೊಮ್ಮಿದ್ದಾರೆ. ಇವರು ಆಳವಾದ ಸಂಶೋಧನ ಜ್ಞಾನದಿಂದ ಪಡೆದಿರುವ ಪರಿಣಿತಿಯಿಂದ ಉತ್ತಮವಾಗಿ ಚಿಕಿತ್ಸೆ ನೀಡಿ ಜನಮನ ಗೆಲ್ಲುತ್ತಿದ್ದಾರೆ. ವಿಶ್ವದರ್ಜೆಯ ಚಿಕಿತ್ಸೆಯನ್ನು ಶಿವಮೊಗ್ಗದಲ್ಲಿ ನೀಡಲು ಸನ್ನದ್ದರಾಗಿದ್ದು, ಇವರ ಕನಸಿನ ಸನ್ ಬೋನ್ ಮತ್ತು ಸ್ಪೈನ್ ಸ್ಪೆಷಾಲಿಟಿ ಆಸ್ಪತ್ರೆ ಸೆಪ್ಟೆಂಬರ್ 28ರಂದು ಲೋಕಾರ್ಪಣೆಗೊಳ್ಳಲಿದೆ. ತನ್ನಿಮಿತ್ತ ಈ ಲೇಖನ...

ನನ್ನ ತಾಯಿಯ ಹೆಸರು ಸಿದ್ದಮ್ಮ. ಅವರಿಗೀಗ 67 ವರ್ಷ. ದಾವಣಗೆರೆ ಜಿಲ್ಲೆ, ಜಗಳೂರು ತಾಲೂಕಿನ ಕಟ್ಟಿಗೆಹಳ್ಳಿ ಗ್ರಾಮದವರು. ಇವರು ಸುಮಾರು 20 ವರ್ಷಗಳಿಂದಲೂ ಸ್ಪೈನಲ್ ಕಾರ್ಡ್ ಸಮಸ್ಯೆಯಿಂದ ಬಳಲುತ್ತಿದ್ದರು. ದಾವಣಗೆರೆಯ ಪ್ರತಿಷ್ಠಿತ ಆಸ್ಪತ್ರೆಗಳಲ್ಲಿ ವರ್ಷಾನುಗಟ್ಟಲೆ ಚಿಕಿತ್ಸೆ ಕೊಡಿಸಿದರೂ ಸಹ ವರ್ಷದಿಂದ ವರ್ಷಕ್ಕೆ ನೋವು ಹೆಚ್ಚಾಗುತ್ತಲೇ ಹೋಯಿತು. ನೈಸರ್ಗಿಕ ಚಿಕಿತ್ಸೆ ಸೇರಿದಂತೆ ಹಿತೈಷಿಗಳು ಹೇಳಿದ ಕಡೆ ಚಿಕಿತ್ಸೆಗೆ ಕರೆದೊಯ್ದು ತೋರಿಸಿದ್ದೂ ಆಯ್ತು. ಆದರೆ ನಮ್ಮಮ್ಮನ ಬೆನ್ನಿನ ನೋವು, ಯಾತನೆ ಕಡಿಮೆಯಾಗಲೇ ಇಲ್ಲ. ಅವರ ನರಳಾಟ ನನಗೆ ಬಹಳ ಸಂಕಟ ತರುತ್ತಿತ್ತು.

ನಮ್ಮೂರಿನ ಪಕ್ಕದ ಗ್ರಾಮದ ವ್ಯಕ್ತಿಯೊಬ್ಬ ಶಿವಮೊಗ್ಗದ ಮೂಳೆ ಮತ್ತು ಕೀಲು ನೋವು ತಜ್ಞರಾದ ಡಾ.ಆಕಾಶ್ ಹೊಸ್ತೋಟ ಅವರ ಬಳಿ ಒಮ್ಮೆ ತೋರಿಸಲು ಹೇಳಿದರು. ಸಾಕಷ್ಟು ಕಡೆ ತೋರಿಸಿ ಯಾವುದೇ ಪ್ರಯೋಜನ ದೊರೆಯದಿದ್ದರಿಂದ ಹತಾಶನಾಗಿದ್ದ ನಾನು ಡಾ. ಆಕಾಶ್ ಅವರ ಬಳಿಯೂ ಒಮ್ಮೆ ತೋರಿಸಿ ಬಿಡೋಣ ಎಂಬ ನಿರ್ಧಾರಕ್ಕೆ ಬಂದೆ. ನನ್ನ ಈ ನಿರ್ಧಾರ



ಫಲ ಕೊಟ್ಟಿತು. ನನ್ನ ತಾಯಿ ಈಗ ಸ್ಪೈನಲ್ ಕಾರ್ಡ್ ಸಮಸ್ಯೆಯಿಂದ ಗುಣ ಮುಖರಾಗಿದ್ದಾರೆ.

ಇದು ಪತ್ರಕರ್ತ ದಾವಣಗೆರೆ ಜಿಲ್ಲೆಯ ಎಸ್.ಎಂ.ಸೋಮನಗೌಡ ಅವರ ಅನುಭವದ ಮಾತು. ಇದು ಕೇವಲ ಇವರೊಬ್ಬರ ಅನುಭವ ಮಾತ್ರವಲ್ಲ; ಬೆನ್ನು ಮತ್ತು ಕೀಲು ನೋವಿನಿಂದ ಬಳಲುತ್ತಿರುವ ನೂರಾರು ಜನರು ಮತ್ತವರ ಪೋಷಕರ ಅನುಭವದ ಮಾತು. ಸಾಕಷ್ಟು ಕಡೆ ತೋರಿಸಿದರೂ ಯಾವ ಪ್ರಯೋಜನವಾಗಲಿಲ್ಲ. ಡಾ. ಆಕಾಶ್ ಅವರ ಬಳಿ ಚಿಕಿತ್ಸೆ ಪಡೆದ ಬಳಿಕ ಗುಣಮುಖರಾಗಿದ್ದೇವೆ ಎಂದು ಹೇಳುವವರ ಸಂಖ್ಯೆಯೂ ಕಡಿಮೆ ಏನಿಲ್ಲ.

ಹಿನ್ನೆಲೆ: ಡಾ. ಆಕಾಶ್ ಅವರ ತಂದೆ ಸೂರ್ಯನಾರಾಯಣ ಶೃಂಗೇರಿ ಸಮೀಪದ ಜಯಪುರ ಗ್ರಾಮದವರು. ತಾಯಿ ನಮಿತಾ. ಆಕಾಶ್ ಇನ್ ಹೋಟೆಲ್ ಉದ್ಯಮಿ. ಈ ದಂಪತಿಯ ಪ್ರಸ್ತುತ ನೆಲೆ ಶಿವಮೊಗ್ಗ. ಸೂರ್ಯನಾರಾಯಣ್ ಅಡಿಕೆ ಮಂಡಿ ವರ್ತಕರು.

ಆಕಾಶ್ ಅವರದ್ದು ಬಾಲ್ಯದಲ್ಲೇ ವೈದ್ಯರಾಗುವ ಕನಸು. ಶಿವಮೊಗ್ಗದ ಎಜುಕೇರ್ ಹಾಗೂ ಜ್ಞಾನದೀಪ ಶಾಲೆಯಲ್ಲಿ ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣ. ಬಂಟ್ವಾಳ ಸಮೀಪದ ಅಳಿಕೆ ಗ್ರಾಮದ ಶ್ರೀ ಸತ್ಯ ಸಾಯಿ ಲೋಕಸೇವಾ ವಿದ್ಯಾ ಕೇಂದ್ರದಲ್ಲಿ ಪಿಯು ಶಿಕ್ಷಣ. ಬೆಂಗಳೂರು ಮೆಡಿಕಲ್ ಕಾಲೇಜಿನಲ್ಲಿ ಎಂಬಿಬಿಎಸ್ ಪದವಿ. ಬೆನ್ನು ಮೂಳೆಯ ಅಧ್ಯಯನದ ಬಗ್ಗೆ ಹೆಚ್ಚು ಆಸಕ್ತಿ. ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಎಂಎಸ್ ಆರ್ಥೋಪೆಡಿಕ್. ಇಂಗ್ಲೆಂಡಿನ ಗ್ಲಾಸ್ಕೋ ವಿಶ್ವವಿದ್ಯಾಲಯದಲ್ಲಿ ಎಂಆರ್‌ಸಿಎಸ್ ಪದವಿ. ಬೆಲ್ಜಿಯಂನ ಸಿಕೋಟ್‌ನಿಂದ ಡಿಪ್ಲೋಮೊ.

ದೆಹಲಿಯ ನ್ಯಾಷನಲ್ ಬೋರ್ಡ್ ಆಫ್ ಎಜುಕೇಶನ್‌ನಲ್ಲಿ ಬೆನ್ನು ಮೂಳೆ ಚಿಕಿತ್ಸೆ ಕುರಿತು ಎಫ್‌ಎನ್‌ಬಿ ಸ್ಪೈನ್ ಸರ್ಜರಿಯಲ್ಲಿ ಉನ್ನತ ಶಿಕ್ಷಣ. ಕೊಯಂಬತ್ತೂರಿನ ಗಂಗಾ ಹಾಸ್ಪಿಟಲ್, ಬೆಂಗಳೂರಿನ ಸಾಕ್ರ ಹಾಸ್ಪಿಟಲ್‌ನಲ್ಲಿ ಡಾ. ಸತೀಶ್ ರುದ್ರಪ್ಪ ಅವರಲ್ಲಿ ಬೆನ್ನು ಹುರಿ ಶಸ್ತ್ರ ಚಿಕಿತ್ಸೆ ಬಗ್ಗೆ ಹೆಚ್ಚಿನ ಅಧ್ಯಯನ. ಸೌತ್ ಕೊರಿಯಾದ ತಜ್ಞ ವೈದ್ಯರೊಂದಿಗೆ ಕೆಲಸ. ಸಂಪೂರ್ಣ ಪರಿಣಿತಿ.

ರಾಷ್ಟ್ರೀಯ ಅಂತರಾಷ್ಟ್ರೀಯ ವೈದ್ಯಕೀಯ ಸಮ್ಮೇಳನದಲ್ಲಿ ಸಂಶೋಧನಾ ಪ್ರಬಂಧ ಮಂಡನೆ. ತಜ್ಞ ವೈದ್ಯರೊಂದಿಗೆ ಸಹ ಲೇಖಕರಾಗಿ ಎರಡು ವೈದ್ಯಕೀಯ ಗ್ರಂಥಗಳ ಪ್ರಕಟಣೆ.

ಮಾತೃ ಹೃದಯಿ: ಡಾಕ್ಟರ್ ಎಂದರೆ ಬರೀ ವೈದ್ಯ ವಿಜ್ಞಾನದ ಜ್ಞಾನ ಭಂಡಾರ, ಯಾಂತ್ರಿಕ ಚಿಕಿತ್ಸೆಗಷ್ಟೇ ಸೀಮಿತವಾಗದೆ ರೋಗಿಗಳ ನೋವಿಗೆ ಸ್ಪಂದಿಸಿ ಅವರ ಮನಮುಟ್ಟುವ ನಡೆ- ನುಡಿ ಹೊಂದಿರಬೇಕು. ಯಾವುದೇ ಹಮ್ಮು- ಬಿಮ್ಮಿಲ್ಲದೆ ಸರಳ- ಸಜ್ಜನಿಕೆಯ ವ್ಯಕ್ತಿತ್ವದ, ಮಾತೃ ಹೃದಯಿಯಾಗಿರುವ ಡಾ. ಆಕಾಶ್ ಅವರು ರೋಗಿಗಳಲ್ಲಿ ಧೈರ್ಯ ತುಂಬಿ, ತಮ್ಮ ಆಳವಾದ ಸಂಶೋಧನ ಜ್ಞಾನದಿಂದ ಪಡೆದಿರುವ ಪರಿಣಿತಿಯಿಂದ ಉತ್ತಮವಾಗಿ ಚಿಕಿತ್ಸೆ ನೀಡಿ ಜನಮನ ಗೆಲ್ಲುತ್ತಿದ್ದಾರೆ. ತಂದೆ ಸೂರ್ಯನಾರಾಯಣ್, ತಾಯಿ ನಮಿತಾ, ನೇತ್ರ ತಜ್ಞೆಯಾಗಿರುವ ಇವರ ಪತ್ನಿ ಡಾ. ಪೂಜಾ ಪತಿಯ ಆಶಯಕ್ಕೆ ಬೆನ್ನೆಲುಬಾಗಿ ನಿಂತಿದ್ದಾರೆ.

ಬೆನ್ನು ಮೂಳೆ ಸಮಸ್ಯೆ ಎಂಬುದು ವ್ಯಾಧಿ ಅಲ್ಲ, ವಿರೂಪತೆಯೂ ಅಲ್ಲ. ಬದಲಾಗಿ ಸವಕಳಿ ಮತ್ತು ಜೀವನಶೈಲಿಯ ಬದುಕಿನಿಂದಾಗಿ ಬರುವ ಸಮಸ್ಯೆಯಾಗಿದೆ. ಬಹಳ ಹೊತ್ತು ಕಂಪ್ಯೂಟರ್ ಮುಂದೆ ಕುಳಿತು ಕೆಲಸ ಮಾಡುವ ಟೆಕ್ಕಿಗಳು, ಹೆಚ್ಚು ಭಾರ ಎತ್ತುವಿಕೆ, ದ್ವಿಚಕ್ರ ಸೇರಿದಂತೆ ವಿವಿಧ ವಾಹನಗಳಲ್ಲಿ ಅತಿ ಹೆಚ್ಚು ಸಂಚಾರ, ಧೂಮಪಾನ, ಅತಿಯಾದ ಬೊಜ್ಜು, ಒತ್ತಡದ ಜೀವನಶೈಲಿ ಬೆನ್ನು ಮತ್ತು ಕೀಲು ನೋವಿಗೆ ಕಾರಣವಾಗುತ್ತದೆ. ಸೂಕ್ತ ಚಿಕಿತ್ಸೆಯ ಮೂಲಕ ಇದಕ್ಕೆ ಪರಿಹಾರ ಕಂಡುಕೊಳ್ಳಬಹುದು ಎನ್ನುತ್ತಾರೆ ಡಾ. ಆಕಾಶ್ ಹೊಸ್ತೋಟ.ಶಿವಮೊಗ್ಗದ ತಿಲಕ್ ನಗರದಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿ ಮಠದ ರಸ್ತೆಯಲ್ಲಿ 15 ಜನರ ತಜ್ಞ ವೈದ್ಯರ ತಂಡದೊಂದಿಗೆ ಡಾ. ಆಕಾಶ್ ಹೊಸ್ತೋಟ ಅವರ ಸನ್ ಬೋನ್ ಮತ್ತು ಸ್ಪೈನ್ ಸ್ಪೆಷಾಲಿಟಿ ಆಸ್ಪತ್ರೆ ಲೋಕಾರ್ಪಣೆ ಗೊಳ್ಳಲಿದೆ. ಬೆನ್ನು ಮತ್ತು ಕೀಲು ನೋವಿನಿಂದ ಬಳಲುವವರು ಇಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಲಿ. ಈ ಆಸ್ಪತ್ರೆ ನೊಂದವರ ಪಾಲಿಗೆ 'ಆಕಾಶ'ದ ಧೃವತಾರೆಯಂತಾಗಲಿ ಎಂಬುವುದೇ ಆಶಯವಾಗಿದೆ.



ಲೇಖಕರು:
ಬಿ. ವರಲಕ್ಷ್ಮಿ ಪ್ರಕಾಶ್,
ತೀರ್ಥಹಳ್ಳಿ. ಮೊ:6366091445

# ವಲಯ ಮಟ್ಟದ ಕ್ರೀಡಾಕೂಟದಲಿ ರಾಮಕೃಷ್ಣ ಗುರುಕುಲ ಶಾಲೆಗೆ ಸಮಗ್ರ ಪ್ರಶಸ್ತಿ



**ಶಿವಮೊಗ್ಗ:** ಶ್ರೀ ರಾಮಕೃಷ್ಣ ಗುರುಕುಲ ವಸತಿ ಶಾಲೆ ಅನುಪಿನಕಟ್ಟೆ ಶಿವಮೊಗ್ಗದ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳು ವಲಯ ಮಟ್ಟದ ಕ್ರೀಡಾಕೂಟದಲ್ಲಿ ಬಾರಿ ಬಹುಮಾನಗಳನ್ನು ಪಡೆದು ಸಮಗ್ರ ಪ್ರಶಸ್ತಿಯನ್ನು ಪಡೆದಿದ್ದಾರೆ.

ಪ್ರಾಥಮಿಕ ಶಾಲೆಯ ಮಕ್ಕಳು ಯೋಗಾಸನದಲ್ಲಿ ಆರು ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದಿದ್ದು, ಚೆಸ್, ಖೋ ಖೋ ದಲ್ಲಿ ಪ್ರಥಮ, ಡಿಸ್ಕಸ್ ತ್ರೋ, ಹರ್ಡಲ್ಸ್, ವಾಲಿಬಾಲ್ ನಲ್ಲಿ ದ್ವಿತೀಯ, ಉದ್ದ ಜಿಗಿತ, 100 ಮೀ ರಿಲೇಯಲ್ಲಿ ತೃತೀಯ ಸ್ಥಾನ ಪಡೆದು ಆಯ್ಕೆಯಾಗಿದ್ದಾರೆ.

ಪ್ರೌಢಶಾಲಾ ವಿದ್ಯಾರ್ಥಿಗಳು ಸಹ ವಲಯ ಮಟ್ಟಕ್ಕೆ ಆಯ್ಕೆಯಾಗಿದ್ದು, ಯೋಗಾಸನ , ಚೆಸ್, ವಾಕ್ ರೇಟ್ ಹರ್ಡಲ್ಸ್ ಟೆನ್ನಿಸ್ ತ್ರೋ ದಲ್ಲಿ ಪ್ರಥಮ ಸ್ಥಾನ ಪಡೆದು ಉದ್ದ ಜಿಗಿತ ಕೋಕೋ ಕಬಡ್ಡಿ ದ್ವಿತೀಯ ಸ್ಥಾನ ಜಾವೆಲಿನ್ ಎತ್ತರ ಜಿಗಿತ 200 ಮೀಟರ್ ರನ್ನಿಂಗ್ ರೇಸ್ ನಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.

17 ವರ್ಷದ ವಯೋಮಿತಿಯ ಜಿಲ್ಲಾ ಮಟ್ಟದ ಈಜು ಸ್ಪರ್ಧೆಯಲ್ಲಿ ಭಾಗವಹಿಸಿ ರಾಜ್ಯಮಟ್ಟಕ್ಕೆ ಹಲವು ವಿದ್ಯಾರ್ಥಿಗಳು ಆಯ್ಕೆಯಾಗಿದ್ದು,

ಈಶ್ವರ್ ಪಿ. 50 ಮೀ. ಬಟಪ್ಲೈ, 100 ಮೀಟರ್ ಬಟಪ್ಲೈ,,100 ಮೀಟರ್ ಟಿ.ಎಂ. ರಿಲೇ ಹಾಗೂ 400 ಮೀಟರ್ ಪ್ರೀ ಸ್ಟೈಲ್ ರಿಲೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಯಶಸ್ ಟಿ.ವಿ. ಅವರು 400 ಮೀಟರ್ ಪ್ರೀಸ್ಟೈಲ್, 100 ಮೀಟರ್ ಬೆಸ್ಟ್ ಸ್ಟ್ರೋಕ್ ಹಾಗು 400 ಮೀಟರ್ ಪ್ರೀ ಸ್ಟೈಲ್ ನಲ್ಲಿ ಪ್ರಥಮ ಸ್ಥಾನ ಪಡೆದಿದ್ದು 400100 ಟಿ.ಎಂ ರಿಲೇಯಲ್ಲಿ ಪ್ರಥಮ ಸ್ಥಾನ ಪಡೆದಿದ್ದು, 400 ಪ್ರೀ ಸ್ಟೈಲ್ ರಿಲೆಯಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.

ಕೃತಿಕ್ ಎಸ್. ಅವರು 50 ಮೀಟರ್ ಬೆಸ್ಟ್ ಸ್ಟ್ರೋಕ್ ನಲ್ಲಿ ಪ್ರಥಮ, 200 ಮೀ. ಬೆಸ್ಟ್ ಸ್ಟ್ರೋಕ್ ದ್ವಿತೀಯ, ಪ್ರೀ ಸ್ಟೈಲ್ ನಲ್ಲಿ ತೃತೀಯ, ಎರಡು ರಿಲೆಗಳಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಫ್ರೀ ಸ್ಟೈಲ್ ರೈಲು ಸಹ ಪ್ರಥಮ ಸ್ಥಾನ ಪಡೆದಿದ್ದಾರೆ .

ನಿತೀಶ್ ಆರ್. ಅವರು 100 ಮೀಟರ್ ಬ್ಯಾಕ್ ಸ್ಟ್ರೋಕ್ 200 ಮೀಟರ್ ಬ್ಯಾಕ್ ಸ್ಟ್ರೋಕ್, 400 ಮೀ. ಐಎಂ ರಿಲೇ, ಪ್ರೀ ಸ್ಟೈಲ್ ರಿಲೇಯಲ್ಲಿ ಪ್ರಥಮ ಸ್ಥಾನ ಪಡೆದಿದ್ದು 200 ಮೀಟರ್ ಫ್ರೀ ಸ್ಟೈಲ್ ನಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಹರ್ಷಲ್ ಜಿ.ಆರ್. ಅವರು 50 ಮೀಟರ್ ಬ್ಯಾಕ್ ಸ್ಟ್ರೋಕ್ ನಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ಭುವನ್ ಕೆ. ಗೌಡ 50 ಮೀಟರ್ ಬ್ಯಾಕ್ ಸ್ಟ್ರೋಕ್‌ನಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಸುಬ್ರಹ್ಮಣ್ಯ ಎಸ್. ನಾಯಕ್ 200 ಮೀಟರ್ ಫ್ರೀ ಸ್ಟೈಲ್ ನಲ್ಲಿ ಹಾಗೂ 100 ಮೀಟರ್ ಫ್ರೀ ಸ್ಟೈಲ್ ನಲ್ಲಿ ದ್ವಿತೀಯ ಸ್ಥಾನ ಪಡೆದಿದ್ದು, ನಿಶ್ಚಿತ್ ಪಿ. 400 ಮೀ ಪ್ರೀ ಸ್ಟೈಲ್ ನಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ನಿರಂಜನ್ ಕೆ. ಆರ್.

100 ಮೀಟರ್ ಬ್ಯಾಕ್ ಸ್ಟ್ರೋಕ್ ನಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ವಿಶಾಲ್ ಕೆ 200 ಮೀಟರ್ ಪ್ರೀ ಸ್ಟೈಲ್, ಹಾಗೂ 100 ಮೀಟರ್ ಪ್ರೀ ಸ್ಟೈಲ್ ನಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ಮೋಕ್ಷಿತ್ ಎಸ್. ಯಾದವ್ ಅವರು 200 ಮೀಟರ್ ಬೆಸ್ಟ್ ಸ್ಟ್ರೋಕ್‌ನಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.

ಬಹುಮಾನ ಪಡೆದು ವಲಯ ಹಾಗೂ ರಾಜ್ಯಮಟ್ಟದ ಪಂದ್ಯಾವಳಿಗೆ ಆಯ್ಕೆ ಆಗುವ ಮೂಲಕ ಶಾಲೆಗೆ ಹಾಗೂ ಶಿವಮೊಗ್ಗ ಜಿಲ್ಲೆಗೆ ಕೀರ್ತಿ ತಂದ ಪ್ರತಿಭಾವಂತ ಕ್ರೀಡಾಪಟುಗಳನ್ನು ರಾಮಕೃಷ್ಣ ವಿದ್ಯಾಸಂಸ್ಥೆಯ ಅಧ್ಯಕ್ಷ ಡಾ. ಡಿ.ಆರ್. ನಾಗೇಶ್, ಕಾರ್ಯದರ್ಶಿ ಶೋಭಾ ವೆಂಕಟರಮಣ ಹಾಗೂ ಶಿಕ್ಷಕ ವೃಂದ ಅಭಿನಂದಿಸಿದೆ.

# ಅ.07ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ

**ಚಿತ್ರದುರ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ನಗರಸಭೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಇದೇ ಅಕ್ಟೋಬರ್ 07ರಂದು ಮಧ್ಯಾಹ್ನ 12ಕ್ಕೆ ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯ ಮದಕರಿನಾಯಕ ವೃತ್ತದಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಸಂಸದ ಗೋವಿಂದ ಎಂ ಕಾರಜೋಳ ಭಾಗವಹಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ, ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಶಾಸಕರಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿ ಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್.ಮಂಜುನಾಥ, ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷ ಪಿ.ರಘು, ನಗರಾಭಿವೃದ್ಧಿ ನಿಗಮದ ಅಧ್ಯಕ್ಷ ತಾಜ್ ಪೀರ್, ನಗರಸಭೆ ಅಧ್ಯಕ್ಷೆ ಎಂ.ಪಿ.ಅನಿತಾ ರಮೇಶ್, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಜಿಲ್ಲಾ ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ, ತಾಲ್ಲೂಕು ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಬಿ.ಕಾಂತರಾಜ್ ಭಾಗವಹಿಸುವರು. ಚಳ್ಳಕೆರೆಯ ಶ್ರೀ ಕೋಟೆ ಬೋರಮ್ಮ ಪ್ರಥಮ ದರ್ಜೆ ಕಾಲೇಜು ಸಹಾಯಕ ಪ್ರಾಧ್ಯಾಪಕ ಡಾ.ಓಬಣ್ಣ ಉಪನ್ಯಾಸ ನೀಡುವರು.

# ಅರೆಕಾಲಿಕ ಸ್ವಯಂ ಸೇವಕರ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಹಾಗೂ ಶಿವಮೊಗ್ಗ ಜಿಲ್ಲೆಯ ಎಲ್ಲಾ ತಾಲೂಕುಗಳ ಕಾನೂನು ಸೇವಾ ಸಮಿತಿಗಳಿಗೆ ಅರೆಕಾಲಿಕ ಸ್ವಯಂ ಸೇವಕರನ್ನು ನೇಮಿಸಿಕೊಳ್ಳುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಿದೆ.ಸಮಾಜದಲ್ಲಿನ ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಜನರಿಗೆ ಹಾಗೂ ಕಾನೂನು ಸೇವೆಗಳನ್ನು ಪಡೆಯಲು ಅರ್ಹರಿರುವ ವ್ಯಕ್ತಿಗಳಿಗೆ ಸೇವಾ ಮನೋಭಾವದಿಂದ ಕೆಲಸ ಮಾಡುವವರಿಗೆ ಮತ್ತು 10ನೇ ತರಗತಿ ಉತ್ತೀರ್ಣರಾಗಿರುವ ಕನ್ನಡ ಓದಲು ಮತ್ತು ಬರೆಯಲು ಬರುವವರಿಗೆ ಆದ್ಯತೆ ನೀಡಲಾಗುವುದು

. ಈ ನೇಮಕಾತಿಯು 1 ವರ್ಷದ ಅವಧಿಯವರಿಗೆ ಮಾತ್ರ ಇರುತ್ತದೆ. ಪ್ರಾಧಿಕಾರ/ಸಮಿತಿ ನೀಡುವ ಗೌರವಧನ ಹೊರತುಪಡಿಸಿ ಯಾವುದೇ ಮೊತ್ತವನ್ನು ಅಪೇಕ್ಷಿಸಬಾರದು. ಪ್ರಾಧಿಕಾರ/ಸಮಿತಿ ನೀಡುವ ತರಬೇತಿಯನ್ನು ಮತ್ತು ಸಭೆಗಳಿಗೆ ತಪ್ಪದೆ ಹಾಜರಾಗಬೇಕು ಹಾಗೂ ಅವರಿಗೆ ವಹಿಸಲಾಗುವ ಕಾರ್ಯಗಳನ್ನು ಕ್ಷಮತೆಯಿಂದ ಪ್ರಾಮಾಣಿಕವಾಗಿ ಮಾಡಬೇಕು.ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿ ಹಾಗೂ ಆಯಾ ತಾಲೂಕು ಸಮಿತಿಗಳ ಕಚೇರಿಗಳಲ್ಲಿ ಉಚಿತವಾಗಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಭಾವಚಿತ್ರದೊಂದಿಗೆ ಸೆ. 30 ರೊಳಗಾಗಿ ಸಲ್ಲಿಸುವಂತೆ ಜಿ.ಕಾ.ಸೇ.ಪ್ರಾ.ದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಕ್ಯಾಂಪಸ್ ನೇಮಕಾತಿಯಲ್ಲಿ ಬಿಐಇಟಿ ವಿದ್ಯಾರ್ಥಿಗಳ ಸಾಧನೆ

**ದಾವಣಗೆರೆ:** ನಗರದ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪ್ರಸ್ತುತ ಶೈಕ್ಷಣಿಕ ವರ್ಷದ ಕ್ಯಾಂಪಸ್ ನೇಮಕಾತಿಯಲ್ಲಿ ಶ್ರೇಷ್ಠ ಸಾಧನೆಗೈದಿದ್ದಾರೆ.ಬೆಂಗಳೂರಿನ ಐಬಿಎಂ ಸಂಸ್ಥೆಯ ಕ್ಯಾಂಪಸ್ ಸಂದರ್ಶನದಲ್ಲಿ ಕಾಲೇಜಿನ ಒಟ್ಟು ಏಳು ವಿದ್ಯಾರ್ಥಿಗಳು, ಕಂಪ್ಯೂಟರ್ ಸೈನ್ಸ್ ವಿಭಾಗದ ಅಭಿಷೇಕ್ ಎಂ ಕಲಘಟಗಿ ಮತ್ತು ತನುಶ್ರೀ

ಎಂ ಪೂಜಾರ್, ಕಂಪ್ಯೂಟರ್ ಸೈನ್ಸ್ ಡೇಟಾ ಸೈನ್ಸ್ ವಿಭಾಗದ ಬಿ. ವಿಜಯಲಕ್ಷ್ಮೀ, ಎಂ ಎಮ್. ದರ್ಶನ್ ಕುಮಾರ್, ಎಂ. ಸೇಜಲ್ ಹಾಗೂ ಕಂಪ್ಯೂಟರ್ ಸೈನ್ಸ್ ಬಿಸಿನೆಸ್ ಸಿಸ್ಟಮ್ ವಿಭಾಗದ ಪೂರ್ವಿ ಎಸ್ ಹೆಬ್ಬಾಳ್ ಮತ್ತು ಎಂ ಎನ್ ವಚನ್ ಇವರುಗಳು ವಾರ್ಷಿಕ 4.5 ಲಕ್ಷ ವೇತನ ಮತ್ತು ಇದರ ಜೊತೆಗೆ ಸಂಸ್ಥೆ ಸೇರುವ ಮುನ್ನ 25 ಸಾವಿರ ಸ್ವಾಗತ ಬೋನಸ್‌ನೊಂದಿಗೆ ಆಯ್ಕೆಯಾಗಿದ್ದಾರೆ ಎಂದು ಕಾಲೇಜಿನ ಸಾರ್ವಜನಿಕ ಸಂಪರ್ಕ ಡೀನ್ ಡಾ. ಸಿ ಎಂ ಕಲ್ಲೇರಪ್ಪ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸದಾಗಿ ಕಿರು ಉದ್ದಿಮೆ ಆರಂಭಿಸುವವರಿಗೆ ಸಹಕಾರ

**ಶಿವಮೊಗ್ಗ:** ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಂ್ುಂವ್ುಬದ್ದ್ಗ್ೂಳಿಸ್ುವಿಕೆ ಯೋಜನೆಯು ಒದು ವಿಶೇಷ ಯೋಜನೆಯಾಗಿದ್ದು ಹೊಸದಾಗಿ ಕಿರು ಉದ್ದಿಮೆ ಆರಂಭಿಸುವವರಿಗೆ ಕೃಷಿ ವಿಶ್ವವಿದ್ಯಾಲಯದಿಂದ ಲಭ್ಯವಿರುವ ಎಲ್ಲ ಸಹಕಾರ ನೀಡಲಾಗುವುದು ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಆರ್.ಸಿ ಜಗದೀಶ್ ತಿಳಿಸಿದರು.

ಆತ್ಮನಿರ್ಭರ ಭಾರತ ಅಭಿಯಾನ, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನ ಗಳ ಸಂಸ್ಕರಣೆ ಹಾಗೂ ರಫ್ತುನಿಗಮ ನಿಯಮಿತ(ಕೆಎಪಿಪಿಇಸಿ), ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕೃಷಿ ತರಬೇತಿ ಕೇಂದ್ರ ಹಳ್ಳಿಕೆರೆ ಹಾಗೂ ಕೃಷಿ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ಜಿ.ಪಂ. ಸಭಾಂಗಣದಲ್ಲಿ ಫಲಾನುಭವಿಗಳಿಗೆ ಏರ್ಪಡಿಸಲಾಗಿದ್ದ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ ಹಾಗೂ ಆತ್ಮ ಯೋಜನೆ ಕುರಿತಾದ ಅರಿಚು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹೊಸದಾಗಿ ಕಿರು ಉದ್ದಿಮೆ ಆರಂಭಿಸುವವರಿಗೆ ವಿಶ್ವವಿದ್ಯಾಲಯದಿಂದ ಸಂಸ್ಕರಣೆಗೆ ಜಾಗ, ಪ್ರಯೋಗಾಲಯ



ಹಾಗೂ ಬ್ಯಾಂಕ್ ಮೂಲಕ ಸಾಲ ಕೂಡ ಕೊಡಿಸಲಾಗುವುದು ಎಂದರು.

ಜಿಲ್ಲೆಯಿಂದ 100 ಟನ್‌ಗಳಷ್ಟು ಅಪ್ಪೆ ಮಿಡಿ ವಿದೇಶಕ್ಕೆ ರಫ್ತಾಗುತ್ತಿದೆ. ಮೆಕ್ಕೆಜೋಳದಿಂದ 50 ಕ್ಕೂ ಹೆಚ್ಚಿನ ಬಗೆಯ ಖಾದ್ಯವನ್ನು ಮಾಡಬಹುದು. ಹಾಗೂ ಹೊಸ ಹೊಸ ಖಾದ್ಯಗಳ ಸಂಶೋಧನೆಗೂ ಅವಕಾಶ ಇದೆ. ಮಸಾಲೆ ಪದಾರ್ಥಗಳ ಸಂಶೊಧನೆಗಳನ್ನು ಕೂಡ ಮಾಡಬಹುದು.

ಅಣಬೆ ಹಾಗೂ ಬೇಕರಿ ಉದ್ಯಮದಲ್ಲಿ ಆಸಕ್ತಿ ಇರುವರಿಗೆ ತರಬೇತಿ ನೀಡಲಾಗುತ್ತದೆ. ಚಾಕೊಲೇಟ್ ಉದ್ಯಮ ಮಾಡುವವರಿಗೂ ಪ್ರೋತ್ಸಾಹ ನೀಡಲಾಗುತ್ತದೆ. ಹಾಗೂ ವಿವಿಧ ಖಾದ್ಯಗಳಲ್ಲಿ ವಿಟಮಿನ್ ಮತ್ತು ಪ್ರೋಟಿನ್ ಮಟ್ಟವನ್ನು ಪರೀಕ್ಷೆ ಮಾಡಲಾಗುತ್ತದೆ ಎಂದ ಅವರು ತಾಂತ್ರಿಕತೆ ಬಗ್ಗೆ ತರಬೇತಿ ಹಾಗೂ ಖಾದ್ಯಗಳ ಪ್ಯಾಕಿಂಗ್‌ಗೂ ತರಬೇತಿ ನೀಡಲಾಗುವುದು. ನಮ್ಮಲ್ಲಿರುವ ವಿಜ್ಞಾನಿಗಳು ಮತ್ತು ಸೌಲಭ್ಯಗಳನ್ನು ರೈತರು, ಆಸಕ್ತರು ಸದುಪಯೋಗ ಪಡಿಸಿಕೊಳ್ಳಬೇಕೆಂದರು.

ಕೆಎಪಿಪಿಇಸಿ ಯ ವ್ಯವಸ್ಥಾಪಕ ನಿರ್ದೇಶಕ ಸಿ.ಎ.ಶಿವಪ್ರಕಾಶ್ ಮಾತನಾಡಿ, ರೈತರ ಆದಾಯ ಹೆಚ್ಚಿಸಿ ಅವರನ್ನೂ ಉದ್ದಿಮೆದಾರರನ್ನಾಗಿ ಮಾಡುವ ಉದ್ದೇಶದಿಂದ ಈ ಯೋಜನೆಯನ್ನು 2020-21 ರಲ್ಲಿ ಪ್ರಾರಂಭಿಸಲಾಗಿದೆ. ರೂ. 15 ಲಕ್ಷದವರೆಗೆ ಸಹಾಯಧನ ನೀಡಲಾಗುವುದು. ಈ ಯೋಜನೆಯಡಿ ಕೇಂದ್ರ ಮತ್ತು ರಾಜ್ಯ ಸೇರಿ ರೂ. 10 ಸಾವಿರ ಕೋಟಿ ಮಂಜೂರಾಗಿದ್ದು ರಾಜ್ಯದ ಪಾಲು ರೂ.493.65ಕೋಟಿ ಆಗಿದೆ

ಕೆಎಪಿಪಿಇಸಿ ಟೀಂ ಲೀಡರ್ ಅರವಿಂದ ಕರೆ ಮಾತನಾಡಿ, ಪಿಎಂಎಫ್‌ಎಂಇ ಯೋಜನೆಯಡಿ ಉದ್ದಿಮೆಗಳಿಗೆ ವೃತ್ತಿಪರ ಹಾಗೂ ತಾಂತ್ರಿಕ ಬೆಂಬಲ ದೊರೆಯುವಿಕೆಯನ್ನು ಹೆಚ್ಚಿಸುವುದು. ಬ್ರಾಂಡಿಂಗ್ ಹಾಗೂ ಮಾರ್ಕೆಟಿಂಗ್ ಬೆಂಬಲ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಸಾಮರ್ಥ್ಯ ನಿರ್ಮಾಣ ಹಾಗೂ ಸಂಶೋಧನೆ, ಕಿರು ಉದ್ದಿಮೆಗಳ ವೈಯಕ್ತಿಕ ಹಾಗೂ ಗುಂಪುಗಳಿಗೆ ಬೆಂಬಲ ನೀಡಲಾಗುವುದು.

ಬ್ರಾಂಡಿಂಗ್ ಹಾಗೂ ಮಾರ್ಕೆಟಿಂಗ್ ಅನ್ನು ಬಲಪಡಿಸುವುದು, ಸಾಮಾನ್ಯ ಸಂಸ್ಕರಣಾ ಸೌಲಭ್ಯ, ಪ್ರಯೋಗಾಲಯಗಳು, ದಾಸ್ತಾನನ್ನು ಶೇಖರಣೆ, ಪ್ಯಾಕೇಜಿಂಗ್, ಮಾರ್ಕೆಟಿಂಗ್ ಹಾಗೂ ಇನ್‌ಕ್ಯೂಬೇಷನ್ ಸೇವೆಗಳಂತಹ ಸಾಮಾನ್ಯ ಸೇವೆಗಳ ದೊರೆಯುವಿಕೆಯನ್ನು ಹೆಚ್ಚಿಸುವುದು. ತಾಂತ್ರಿಕ ಸಂಸ್ಥೆಗಳನ್ನು ಬಲಪಡಿಸುವುದು, ಆಹಾರ ಸಂಸ್ಕರಣಾ ವಲಯದಲ್ಲಿ ಸಂಶೋಧನೆ ಹಾಗೂ ತರಬೇತಿಗೆ ಪ್ರೋತ್ಸಾಹ ನೀಡಲಾಗುವುದು ಎಂದ ಅವರು, ಈ ಯೋಜನೆಯಡಿ ಅರ್ಜಿ ಸಲ್ಲಿಕೆ ವಿಧಾನ, ಡಿಆರ್‌ಪಿ (ಜಿಲ್ಲಾ ಸಂಪನ್ಮೂಲ ವ್ಯಕ್ತಿ) ಆಯ್ಕೆ ಇತರೆ ಮಾಹಿತಿ ನೀಡಿದರು.

ಲೀಡ್ ಬ್ಯಾಂಕ್ ಮ್ಯಾನೇಜರ್ ಹನುಮಂತಪ್ಪ ಮಾತನಾಡಿ ಈ ಯೋಜನೆಗೆ ಸಂಬಂಧಿಸಿದಂತೆ ಲಭ್ಯವಿರುವ ಸಾಲ ಸೌಲಭ್ಯದ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಫಲಾನುಭವಿಗಳೊಂದಿಗೆ ಸಂವಾದ ನಡೆಸಲಾಯಿತು.

ಜಿ.ಪಂ ಉಪ ಕಾರ್ಯದರ್ಶಿ ಸುಜಾತ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ನಾಗರಾಜ್, ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಬಾಬುರಾಮ್. ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕ ಶಿವಕುಮಾರ್, ಇತರೆ ಅಧಿಕಾರಿಗಳು, ಯೋಜನೆಯ ಫಲಾನುಭವಿಗಳು ಪಾಲ್ಗೊಂಡಿದ್ದರು

# ಸಚಿವರ ಹುಟ್ಟು ಹಬ್ಬ ಪ್ರಯುಕ್ತ ಬಟ್ಟೆ ಬ್ಯಾಗ್ ವಿತರಿಸಿ ಪರಿಸರ ಕಾಳಜಿ ತೋರಿದ ಸಾಗರ್ ಎಲ್ ಎಂ ಹೆಚ್



**ದಾವಣಗೆರೆ:** ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ಅವರ ಹುಟ್ಟುಹಬ್ಬದ ದಿನದಂದು ಪರಿಸರ ಕಾಳಜಿಗಾಗಿ ಪ್ಲಾಸ್ಟಿಕ್ ಮುಕ್ತ ಮಾಡಲು ನಿರ್ಧಾರಿಸಿದ್ದು, ಇದೀಗ ಬಟ್ಟೆ ಬ್ಯಾಗ್ ವಿತರಣೆ ಮಾಡುವ ಕಾರ್ಯವನ್ನು ಮಹಾನಗರ ಪಾಲಿಕೆ ಸದಸ್ಯರಾದ ಸಾಗರ್ ಎಲ್ ಎಂ ಹೆಚ್ ಅವರು ಮುಂದುವರೆಸಿದ್ದಾರೆ. ಹುಟ್ಟುಹಬ್ಬ ಎಂದರೆ ಕೇವಲ ಆಡಂಬರ ಸಡಗರ ಇರಬಾರದು ಅಭಿಮಾನದ ಜೊತೆಗೆ ಸಮಾಜಮುಖಿ ಕಾರ್ಯಗಳನ್ನು ಮಾಡಬೇಕೆಂಬುದು ಇವರ ಉದ್ದೇಶವಾಗಿದೆ. ಈ ಹಿನ್ನೆಲೆ ಸಾಗರ್ ಎಲ್ ಎಂ ಹೆಚ್ ಪ್ಲಾಸ್ಟಿಕ್ ಬಳಕೆ ಬದಲು ಬಟ್ಟೆ ಬ್ಯಾಗ್ ವಿತರಣೆ ಮಾಡುವ ಕಾರ್ಯಕ್ಕೆ ಮುಂದಾದರು. ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ಅವರ ಹುಟ್ಟುಹಬ್ಬದ ದಿನ ಬಟ್ಟೆ ಬ್ಯಾಗ್ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದ್ದು, ಪರಿಸರ ಕಾಳಜಿ ಹಿನ್ನೆಲೆ ಹಲವು ವಾರ್ಡ್ ಗಳಲ್ಲಿ ಬಟ್ಟೆ ಬ್ಯಾಗ್ ಗಳನ್ನು ವಿತರಣೆ ಮಾಡುವ ಮೂಲಕ ಪರಿಸರ ಬಗ್ಗೆ ಅರಿವು ಜಾಗೃತಿಯನ್ನು ಮೂಡಿಸಲಾಗುತ್ತಿದೆ.

ಪ್ಲಾಸ್ಟಿಕ್ ಬ್ಯಾಗ್ ಗಳನ್ನು ಬಳಕೆ ಮಾಡುವುದರಿಂದ ನಮ್ಮ ಪರಿಸರಕ್ಕೆ ಹಾನಿಯಾಗುತ್ತದೆ ಈ ಕಾರಣ ನಾವು ಪರಿಸರವನ್ನು ಉಳಿಸಿಕೊಳ್ಳಬೇಕು, ಪರಿಸರಕ್ಕೆ ಮಾರಕವಾಗುವ ಪ್ಲಾಸ್ಟಿಕ್ ಬಳಕೆ ನಿಲ್ಲಿಸಬೇಕೆಂದು ಜನರಲ್ಲಿ ಮನವಿ ಮಾಡಿದ್ದಾರೆ. ಈ ನಡುವೆ, ವಿಜಯ ದಶಮಿ ಹಬ್ಬದ ಹಿನ್ನೆಲೆ ತಮ್ಮ ವಾರ್ಡ್ ನ ಪೌರ ಕಾರ್ಮಿಕರು ಮತ್ತು ಸಾರ್ವಜನಿಕರಿಗೆ ಉಡುಗೊರೆ ನೀಡುವ ಮೂಲಕ ಮಾನ್ಯ ಸಚಿವರವಾರದ ಎಸ್ ಎಸ್ ಮಲ್ಲಿಕಾರ್ಜುನ್ ಅವರ ಹುಟ್ಟುಹಬ್ಬದ ಪ್ರಯುಕ್ತ ಬಟ್ಟೆ ಬ್ಯಾಗ್ ಬಳಸಿ ಎಂದು ತಿಳಿಸಿದ್ದಾರೆ. ಸಾಗರ್ ಎಲ್ ಎಂ ಹೆಚ್ ಅವರು ತೋರಿದ ಪರಿಸರ ಕಾಳಜಿಗೆ ಸಾರ್ವಜನಿಕರು ಮತ್ತು ಪರಿಸರ ಪ್ರೇಮಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದು, ಬಟ್ಟೆ ಬ್ಯಾಗ್ ಬಳಿಸಿ ಪ್ಲಾಸ್ಟಿಕ್ ಮುಕ್ತ ಮಾಡುವ ಅಭಿಯಾನವನ್ನು ನಿರಂತರವಾಗಿ ಮಾಡಬೇಕೆಂದು ತಿಳಿಸದ್ದಾರೆ. ಈ ಅಭಿಯಾನ ನಿರಂತರವಾಗಿರುತ್ತದೆ, ಪರಿಸರ ಕಾಳಜಿ ಬಗ್ಗೆ ಅರಿವು ಮೂಡಿಸಲಾಗುವುದು ಎಂದು ಸಾಗರ್ ಎಲ್ ಎಂ ಹೆಚ್ ಕೂಡ ತಿಳಿಸಿದ್ದಾರೆ.

# ಅ.10 ರಂದು ನಗರದಲ್ಲಿ ಕಲಾ ಪ್ರತಿಭೋತ್ಸವ

**ಚಿಕ್ಕಮಗಳೂರು:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮಕ್ಕಳು ಮತ್ತು ಯುವಜನರ ಕಲಾ ಪ್ರತಿಭೆಯನ್ನು ಗುರುತಿಸಿ ಅವರಿಗೆ ಉತ್ತೇಜನ ನೀಡುವ ಸಲುವಾಗಿ ಹಾಗೂ ಅವರ ಕಲಾನೈಪುಣ್ಯವನ್ನು ವೃದ್ಧಿಗೊಳಿಸುವಂತೆ ಮಾಡಲು ಕಲಾ ಪ್ರತಿಭೋತ್ಸವವನ್ನು ನಗರದ ಕುವೆಂಪು ಕಲಾಮಂದಿರದಲ್ಲಿ ಜಿಲ್ಲಾ ಮಟ್ಟದ ಕಲಾ ಪ್ರತಿಭೋತ್ಸವವನ್ನು ಆಯೋಜಿಸಲಾಗಿದೆ.ಈ ಸ್ಪರ್ಧೆಯನ್ನು ವಯಸ್ಸಿಗೆ ಅನುಗುಣವಾಗಿ ಬಾಲಪ್ರತಿಭೆ, ಕಿಶೋರ ಪ್ರತಿಭೆ ಹಾಗೂ ಯುವ ಪ್ರತಿಭೆ ಎಂಬ ಮೂರು ವಿಭಾಗಗಳಲ್ಲಿ ನಡೆಸಲಾಗುತ್ತಿದ್ದು,

ಭಾಗವಹಿಸುವವರು ಬಿಳಿ ಹಾಳೆಯಲ್ಲಿ ತಾವು ಸ್ಪರ್ಧಿಸುವ ಪ್ರಕಾರ ಹಾಗೂ ಜನ್ಮ ದಿನಾಂಕಕ್ಕೆ ಸಂಬಂಧಿಸಿದ ದಾಖಲೆಯನ್ನು ಲಗತ್ತಿಸಿ ಅಕ್ಟೋಬರ್ 10ರ ಸಂಜೆ 5.30ರೊಳಗೆ ತಲುಪುವಂತೆ ಖುದ್ದಾಗಿ ಆಗಲಿ,

ಅಂಚೆ ಮೂಲಕವಾಗಿ ಆಗಲಿ ಕಳುಹಿಸಬೇಕು.ಬಾಲ ಪ್ರತಿಭೆ ವಿಭಾಗದಲ್ಲಿ ಶಾಸ್ತ್ರೀಯ ನೃತ್ಯ, ಜನಪದ ಗೀತೆ, ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿದ್ದು,ವಿಭಾಗದಲ್ಲಿ ಶಾಸ್ತ್ರೀಯ ನೃತ್ಯ, ಜನಪದ ಗೀತೆ, ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿದ್ದು,

ಕಿಶೋರ ಪ್ರತಿಭೆಯಲ್ಲಿ ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಸಂಗೀತ, ಶಾಸ್ತ್ರೀಯ ನೃತ್ಯ, ಜನಪದ ಗೀತೆ, ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿವೆ. ಯುವ ಪ್ರತಿಭೆ ವಿಭಾಗದಲ್ಲಿ ಚಿತ್ರಕಲೆ, ಕರ್ನಾಟಕ/ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ನನ್ನ ಮೆಚ್ಚಿನ ಸಾಹಿತಿ ಆಶುಭಾಷಣ, ಶಾಸ್ತ್ರೀಯ ನೃತ್ಯ, ನಾಟಕ (ಸಮೂಹ ಸ್ಪರ್ಧೆ), ಕರ್ನಾಟಕ/ ಹಿಂದೂಸ್ತಾನಿ ವಾದ್ಯ ಸಂಗೀತ ಹಾಗೂ ಸುಗಮ ಸಂಗೀತ ಪ್ರಕಾರಗಳಿವೆ. ಹೆಚ್ಚಿನ ಮಾಹಿತಿಗೆ 08262-298172 ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




Scanned with OKEN Scanner

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**